ಸಂಪುಟ : 9 ಸಂಚಿಕೆ 272 ಪುಟ : 4 ಬೆಲೆ: 3.00 ಮಂಗಳವಾರ ಡಿಸೆಂಬರ್ 10 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 272 Pages : 4 Price : 3.00 Tuesday December 10 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಅನುಭವ ಮಂಟಪ ತೈಲವರ್ಣ ಚಿತ್ರ ಅನಾವರಣಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

# ಅನುಭವ ಮಂಟಪದ ಸಿದ್ಧಾಂತದಂತೆಯೇ ಸರ್ಕಾರ ನಡೆಸುತ್ತಿದ್ದೇವೆ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣ ವಿಧಾನಸೌಧ**

12ನೇ ಶತಮಾನದಲ್ಲಿ ಬಸವಾದಿ ಶರಣರು ಸಾಮಾಜಿಕ ಕ್ರಾಂತಿಯನ್ನು ಈ ನಾಡಿನಲ್ಲಿ ಮಾಡಿದರು. ಸಮಾಜದಲ್ಲಿನ ಅಸಮಾನತೆ, ಜಾತಿ ವ್ಯವಸ್ಥೆ ತೊಲಗಿಸಿ, ಸಮ ಸಮಾಜ ನಿರ್ಮಾಣ ಮಾಡಬೇಕು ಎಂಬ ಪರಿಕಲ್ಪನೆಯಲ್ಲಿ ವಿಶ್ವಗುರು ಬಸವಣ್ಣನವರ ನೇತೃತ್ವದಲ್ಲಿ ರಚಿಸಲಾಗಿದ್ದ ಅನುಭವ ಮಂಟಪದ ಮಾದರಿಯ ತೈಲ ವರ್ಣಚಿತ್ರವನ್ನು ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಅನಾವರಣಗೊಳಿಸುವ ಅವಕಾಶ ದೊರೆತಿದ್ದು ನನ್ನ ಸೌಭಾಗ್ಯ. ಬೆಂಗಳೂರಿನ ವಿಧಾನಸೌಧದಲ್ಲಿಯೂ ಅನುಭವ ಮಂಟಪದ ಬೃಹತ್ ತೈಲವರ್ಣ ಚಿತ್ರ ಅನಾವರಣಗೊಳಿಸಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದ ಆವರಣದಲ್ಲಿ ಅನುಭವ ಮಂಟಪದ ತೈಲವರ್ಣ ಚಿತ್ರ ಅನಾವರಣಗೊಳಿಸಿದ



ವಿಷಯಕ್ಕೆ ಸಂಬಂಧಿಸಿದಂತೆ ಸೋಮವಾರ ವಿಧಾನಸಭೆಯಲ್ಲಿ ನಡೆದ ಚರ್ಚೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಅಸಮಾನತೆ ಹೋಗಲಾಡಿಸಿ ಸಮ ಸಮಾಜ ನಿರ್ಮಾಣದ ಕನಸನ್ನು ಬಸವಾದಿ ಶರಣರು ಹೊಂದಿದ್ದರು. ಕರ್ಮ ಸಿದ್ಧಾಂತವನ್ನು ಬಸವಾದಿ ಶರಣರು ತಿರಸ್ಕರಿಸಿದ್ದರು. ಮೌಢ್ಯ ಕಂದಾಚಾರಗಳನ್ನು ಹುಟ್ಟುಹಾಕಿ, ಅದನ್ನು ನಂಬುವಂತೆ ಮಾಡಿ, ಜಾತಿ ವ್ಯವಸ್ಥೆ, ಅಸಮಾನತೆ, ಮೇಲುಕೀಳು ನಿರ್ಮಾಣ ಮಾಡುವುದು ಧರ್ಮವಲ್ಲ. ಬಸವಣ್ಣನವರ ವ್ಯಾಖ್ಯಾನದಂತೆ 'ದಯೆ ಇಲ್ಲದ ಧರ್ಮ ಯಾವುದಯ್ಯ, ದಯವೇ ಧರ್ಮದ ಮೂಲವಯ್ಯ'. ಧರ್ಮವನ್ನು ವ್ಯಾಖ್ಯಾನ ಮಾಡಿ ಎಲ್ಲ ವರ್ಗದವರಿಗೂ ಅರ್ಥವಾಗುವ ರೀತಿಯಲ್ಲಿ ಅವರು ಹೇಳಿದ್ದರು. ಜನರಿಂದ–ಜನರಿಗೋಸ್ಕರ–ಜನರಿಗಾಗಿ ಎಂಬುದನ್ನು ಒಪ್ಪಿಕೊಂಡು, ಅನುಭವ ಮಂಟಪದ ಸಿದ್ಧಾಂತದಂತೆ–ಯೇ ನಾವು ಸರ್ಕಾರವನ್ನು ನಡೆಸುತ್ತಿದ್ದೇವೆ ಎಂದರು.

ಅನುಭವ ಮಂಟಪದ ಅಧ್ಯಕ್ಷರಾಗಿದ್ದ ಅಲ್ಲಮಪ್ರಭು ತಳಸಮುದಾಯದಿಂದ ಬಂದವರು. 12ನೇ ಶತಮಾನದಲ್ಲಿಯೇ ಅನುಭವ ಮಂಟಪವನ್ನು ಜಾತಿ ಧರ್ಮ, ಲಿಂಗ ತಾರತಮ್ಯವಿಲ್ಲದೆ ಜಗತ್ತಿಗೆ ಮೊದಲ ಬಾರಿಗೆ ಸಂಸತ್ ಅನ್ನು ಪರಿಚಯಿಸಿದ್ದರು. ಎಲ್ಲ ಜಾತಿ, ವರ್ಗ, ಮಹಿಳೆಯರು ಇದರಲ್ಲಿ ಪಾಲ್ಗೊಳ್ಳುತ್ತಿದ್ದರು. ಸಮಾಜದಲ್ಲಿನ ಆಗು–ಹೋಗುಗಳ ಬಗ್ಗೆ ಚರ್ಚೆ ಅನುಭವ ಮಂಟಪದಲ್ಲಿ ನಡೆಯುತ್ತಿತ್ತು. ಬುದ್ಧನ ಕಾಲದಲ್ಲಿಯೂ ಕೂಡ ಇದೇ ರೀತಿಯಲ್ಲಿ ಸಂಸತ್ ಇತ್ತು ಎಂಬುದನ್ನು ಓದಿದ್ದೇವೆ. ಬುದ್ಧ, ಬಸವ, ಅಂಬೇಡ್ಕರ್, ಗಾಂಧೀಜಿ ಎಲ್ಲರೂ ಸಮಾಜದಲ್ಲಿ ಸಮ ಸಮಾಜ ನಿರ್ಮಾಣ ಮಾಡಬೇಕು ಎಂಬ ಆಶಯವನ್ನೇ ಹೊಂದಿದ್ದರು ಎಂದರು.

▶▶3ನೇ ಪುಟಕ್ಕೆ

ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಮಾತನಾಡಿ, ಅನುಭವ ಮಂಟಪ ವಿಶ್ವದ ಪ್ರಥಮ ಸಂಸತ್ತು ಎಂಬ ಹೆಗ್ಗಳಿಕೆ ಹೊಂದಿದೆ. ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ಇಡೀ ಜಗತ್ತಿಗೆ ಪರಿಚಯಿಸಿದ್ದು ಅನುಭವ ಮಂಟಪ. ಹೆಣ್ಣಿಗೆ, ಮಣ್ಣಿಗೆ, ಅಧಿಕಾರಕ್ಕಾಗಿ ಕ್ರಾಂತಿಗಳಾಗಿದ್ದನ್ನು ನಾವು ಕೇಳಿದ್ದೇವೆ. ಆದರೆ, ಸಮಾಜದ ಏಳಿಗೆಗೆ ಕ್ರಾಂತಿಯಾಗಿದ್ದು 12ನೇ ಶತಮಾನದಲ್ಲಿ ಬಸವಾದಿ ಶರಣರ ಕಾಲದಲ್ಲಿ ಮಾತ್ರ. 2025ರಲ್ಲಿ 670 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ನೂತನ ಅನುಭವ ಮಂಟಪದ ಕಾಮಗಾರಿ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡುವ ಕಾರ್ಯ ಮಾಡುತ್ತೇವೆ ಎಂದರು.



## ಪಂಚಮಸಾಲಿ 2ಎ ಮೀಸಲಾತಿ ಕೇಳಲು ನಾನು ಅಡ್ಡಿಯಾಗಿಲ್ಲ: ಸಿಎಂ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ**

ಪಂಚಮಸಾಲಿ 2ಎ ಮೀಸಲಾತಿ ವಿಚಾರವಾಗಿ ಹಿಂದಿನ ಸರ್ಕಾರ ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಿದ ಅಫಿಡೆವಿಟ್ ಹಾಗೂ ನ್ಯಾಯಾಲಯದ ಆದೇಶವನ್ನು ಸದನದ ಮುಂದೆ ಮಂಡಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಳಗಾವಿ ಸುವರ್ಣ ಸೌಧದಲ್ಲಿ ಸೋಮವಾರ ಆರಂಭವಾದ ಚಳಿಗಾಲದ ಅಧಿವೇಶನದಲ್ಲಿ ಪತ್ರಿಪಕ್ಷಗಳ ಪ್ರಶ್ನೆಗಳಿಗೆ ಅವರು ಉತ್ತರಿಸಿದರು.

ಪಂಚಮಸಾಲಿಗಳನ್ನು 2ಎ ಸೇರಿಸಲು ಬಹಳ ದಿನಗಳಿಂದ ಹೋರಾಟ ನಡೆಸಲಾಗುತ್ತಿದೆ. ನಾನು ಮುಖ್ಯಮಂತ್ರಿಯಾದ ಮೇಲೆ ಜಯಮೃತ್ಯುಂಜಯ ಸ್ವಾಮೀಜಿ ಸೇರಿದಂತೆ ಪಂಚಮಸಾಲಿ ಮುಖಂಡರೊಂದಿಗೆ ಎರಡು ಬಾರಿ ಸಭೆ ನಡೆಸಿದ್ದೇನೆ. ಪಂಚಮಸಾಲಿಗಳು ಮೀಸಲಾತಿ ಕೇಳಲು ನಾನು ಅಡ್ಡಿಯಾಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಿಳಿಸಿದರು.

ರಾಜ್ಯದಲ್ಲಿ ಹಿಂದುಳಿದ ವರ್ಗಗಳನ್ನು ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–3ಎ ಹಾಗೂ ಪ್ರವರ್ಗ–3ಬಿ ಎಂದು ವಿಂಗಡಸಲಾಗಿದೆ. ವೀರಶೈವ ಲಿಂಗಾಯಿತ ಹಾಗೂ ಪಂಚಮಸಾಲಿ ಜಾತಿಗಳು 3ಬಿ ಅಡಿ ಮೀಸಲಾತಿ ಪಡೆಯುತ್ತಿವೆ. ಪಂಚಮಸಾಲಿಗಳನ್ನು 2ಎ ಸೇರಿಸಲು ರಾಜ್ಯದ ಶಾಶ್ವತ ಹಿಂದುಳಿದ ವರ್ಗಗಳ ಆಯೋಗದ ವರದಿ ಪಡೆಯುವುದು ಅವಶ್ಯಕವಾಗಿದೆ. ಈ ಹಿನ್ನೆಲೆಯಲ್ಲಿ ಆಯೋಗದ ಮುಂದೆ ಮೀಸಲಾತಿ ವಿಚಾರವನ್ನು ಮಂಡಿಸುವಂತೆ ಪಂಚಮಸಾಲಿ ಹೋರಟಗಾರರಿಗೆ ತಿಳಿಸಿದ್ದೇನೆ ಎಂದು ಸ್ಪಷ್ಟಪಡಿಸಿದರು.

### ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕ್ವಾರಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಸಂಘದ ಅಧ್ಯಕ್ಷ ರಾಮಣ್ಣ ಕಾಮೋಜಿ

# ಸ್ಟೋನ್ ಕ್ರಷರ್‌ಗೆ ವಿಧಿಸಿದ ನಿಯಮ ಸಡಿಲಗೊಳಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಈಗಿನ ಓಟಿಎಸ್ ಪದ್ಧತಿಯ ವಿರುದ್ಧ ರಾಜ್ಯ ಯೂನಿಯನ್ ಆಫ್ ಕರ್ನಾಟಕ ಸ್ಟೋನ್ ಕ್ರಷರ್ ಮಾಲೀಕರಿಂದ ಹಲವು ಬಾರಿ ಸರ್ಕಾರಕ್ಕೆ ಹಾಗೂ ಇಲಾಖೆಗೆ ಮನವಿ ಮಾಡಲಾಗಿದೆ. ಆದರೆ, ಅಧಿಕಾರಿಗಳ ತಪ್ಪು ಮಾಹಿತಿಯಿಂದ ಈಗಾಗಲೇ ರಾಜಧನ ಡಬ್ಲ್ಯೂಇಡಿಎಎಸ್ ಸರ್ಕಾರದ ಕಾಮಗಾರಿಗಳಿಂದ ರಾಜಧನ ಭರ್ತಿಯಾಗಿದ್ದು, ಓಟಿಎಸ್ ಪದ್ಧತಿಯಂತೆ ದಂಡ ವಿಧಿಸಿ ಮಾಲೀಕರಿಗೆ ತುಂಬಲಾರದ ಹೊರೆಯನ್ನು ಹಾಕಿದೆ. ಈ ಪದ್ಧತಿಗೆ ನಮ್ಮ ಸಂಘವು ಕಲ್ಲುಗಣಿ ಗುತ್ತಿಗೆದಾರರ ಪರವಾಗಿ ವಿರೋಧ ವ್ಯಕ್ತಪಡಿಸುತ್ತದೆ ಎಂದು ಜಿಲ್ಲಾ ಕ್ವಾರಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಸಂಘದ ಅಧ್ಯಕ್ಷ ರಾಮಣ್ಣ ಕಾಮೋಜಿ ಹೇಳಿದರು.



ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಲ್ಲುಗಣಿಗೆ ವಿಧಿಸಿದ 5 ಪಟ್ಟು ದಂಡವನ್ನು ವಜಾಗೊಳಿಸಿ ಹೆಕ್ಟೇರ್‌ಗೆ 5 ಲಕ್ಷಗಳವರೆಗೆ ದಂಡ ವಿಧಿಸಿ ಈ ಪ್ರಕರಣವನ್ನು ಅಂತ್ಯಗೊಳಿಸಬೇಕು. ಕಲ್ಲುಣಿಯಿಂದ ತೆಗೆದ ಸರಕು ಅಥವಾ ಸ್ಟೋನ್ ಕ್ರಷರ್‌ನಿಂದ ಹೋದ ಸರಕು ಸರ್ಕಾರಿ ಕಾಮಗಾರಿಗಳಿಗೆ ಹೋಗಿರುತ್ತದೆ. ಇಲ್ಲಿಂದ ರಾಜಧನ ಬಂದಿರುತ್ತದೆ. ಮತ್ತು ವರ್ಷ ವರ್ಷ ಕಲ್ಲುಗಣಿ ಆಡಿಟ್ ಸಹ ಆಗಿರುತ್ತದೆ. ಹೀಗಿರುವಾಗ ಯಾವ ರೀತಿಯಿಂದ ದಂಡ ಹಾಕುತ್ತಿದ್ದೀರಿ ಎಂಬ ವಿಷಯ ಇನ್ನೂ ತಿಳಿದಿಲ್ಲ. ನಾವು ಕಟ್ಟುವ ರಾಜಧನ ಈಗಾಗಲೇ ಗುತ್ತಿಗೆದಾರರಿಂದ ಸರ್ಕಾರಕ್ಕೆ ಜಮಾ ಆಗುತ್ತಾ ಬಂದಿದೆ. ಆದ್ದರಿಂದ ನಮ್ಮ ಕಲ್ಲುಗಣಿಗೆ ಹಾಕಿದ ದಂಡದ ಬಾಬತ್ತನ್ನು ತೆಗೆದುಹಾಕಬೇಕು ಎಂದು ಆಗ್ರಹಿಸಿದರು. ಕೆಎಂಎಂಸಿಆರ್ ನಿಯಮದಲ್ಲಿ 5 ಪಟ್ಟು ದಂಡದ ವಿಷಯವನ್ನು ತೆಗೆದು ಹೆಕ್ಟೇರ್‌ಗೆ 5 ಲಕ್ಷ ರೂಪಾಯಿಗಳವರೆಗೆ ದಂಡ ವಿಧಿಸಬೇಕು ಮತ್ತು ತಿದ್ದುಪಡಿ ಮಾಡಿ ಸರಳೀಕರಣ ಮಾಡಿಕೊಡಬೇಕು. ಅವೈಜ್ಞಾನಿಕವಾಗಿ ಸ್ಟೋನ್ ಕ್ರಷರ್‌ನಿಂದ ವಿದ್ಯುಚ್ಛಕ್ತಿ ಬಿಲ್ ಪಡೆಯುವುದನ್ನು ತಕ್ಷಣ ನಿಲ್ಲಿಸಬೇಕು. ಕಲ್ಲುಗಣಿ ಮತ್ತು ಸ್ಟೋನ್ ಕ್ರಷರ್‌ನಿಂದ ಸರಕು ಸರಬರಾಜು ಮಾಡುವ ಲಾರಿಗಳಿಗೆ ಅಳವಡಿಸಲು ಸೂಚಿಸಿದ ಜಿಪಿಎಸ್ ಸಿಸ್ಟಮ್ ಅನ್ನು ತೆಗೆಯಬೇಕು ಎಂದರು.

ರಾಜಧನವು ರಾಜ್ಯದಲ್ಲಿ ಡ್ಯೂಯಲ್ ಪಾಲಿಸಿಯಾಗಿ ಕಲೆಕ್ಟ್ ಆಗುತ್ತಿದೆ. ಇದನ್ನು ತಕ್ಷಣ ನಿಲ್ಲಿಸಿ. ಈ ರಾಜಧನವನ್ನು ಕಲ್ಲುಗಣಿ ಗುತ್ತಿಗೆದಾರರಿಂದ ಅಥವಾ ಸರ್ಕಾರಿ ಕಾಮಗಾರಿ ಗುತ್ತಿಗೆದಾರರಿಂದ ಯಾರಾದರೂ ಒಬ್ಬರ ಕಡೆಯಿಂದ ರಾಜಧನವನ್ನು ಪಡೆಯಬೇಕು ಎಂದವರು ಹೇಳಿದರು.

ಈ ಸಂದರ್ಭದಲ್ಲಿ ಎಂ.ಡಿ. ಬಟ್ಟೂರ, ಅಶೋಕ ಸೋನಬೋಜಿ, ರಾಮಕೃಷ್ಣ, ಎಂ.ಎಂ. ದಾಯಮ್ಮನವರ, ಬಸವರಾಜ ರಾಯಪ್ಪನವರ, ನಾಗರಾಜ ನೀಲಗುಂದ, ಗಣೇಶ ಬಂಕಾಪೂರ, ಸಿದ್ದೇಶ್ ಯಲ್ಲಾಪೂರ, ಶಿವಾನಂದ ಪಲ್ಲೇದ, ಸುರೇಂದ್ರ ರೆಡ್ಡಿ, ಶ್ರೀನಿವಾಸ್ ರಾವ್ ಉಪಸ್ಥಿತರಿದ್ದರು.

**ಬೇಡಿಕೆಗಳು**

* ರಾಜ್ಯದಲ್ಲಿ ಪಟ್ಟಾ ಭೂಮಿಯಲ್ಲಿ ಕಲ್ಲುಗಣಿಗಾರಿಕೆ ಮಾಡುವವರಿಗೆ ಸಂಪೂರ್ಣ ರಾಜಧನ ತೆಗೆಯಬೇಕು.
* ಕಲ್ಲುಗಣಿ ಗುತ್ತಿಗೆ ಅವಧಿ 30 ವರ್ಷಗಳಿಂದ 50 ವರ್ಷಕ್ಕೆ ಡಿಮೇಡ್ ಎಕ್ಸ್‌ಟೆನ್ಷನ್ ಮಾಡಿಕೊಡಬೇಕು.
* ಸ್ಟೋನ್ ಕ್ರಷರ್ ಲೈಸೆನ್ಸ್ ಫಾರಂ ಸಿ ಅವಧಿಯನ್ನು 50 ವರ್ಷಗಳವರೆಗೆ ಡೀಮೆಡ್ ಎಕ್ಸ್‌ಟೆನ್ಷನ್ ಮಾಡಿಕೊಡಬೇಕು.

ಕ್ವಾರಿ ಮತ್ತು ಸ್ಟೋನ್ ಕ್ರಷರ್ ಮಾಲಕರು ಸರ್ಕಾರದ ಎಲ್ಲ ನಿಯಮಗಳ ಅನುಸಾರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಆದರೆ, ಸರ್ಕಾರ ಪದೇ–ಪದೆ ನಮ್ಮ ಮೇಲೆ ಗಧಾ ಪ್ರಹಾರ ಮಾಡುತ್ತಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅಡಿಯಲ್ಲಿ ಬರುವ ಕಂಪನಿಗಳು ಯಾವುದೇ ನಿಯಮ ಅನುಸರಿಸುತ್ತಿಲ್ಲ. ಸರ್ಕಾರದ ದ್ವಿಮುಖ ನೀತಿಯನ್ನು ಕೈಬಿಟ್ಟು ಕ್ವಾರಿ ಮತ್ತು ಸ್ಟೋನ್ ಕ್ರಷರ್ ಮಾಲಕರ ಹಿತ ಕಾಪಾಡಬೇಕು.
**– ವಿಜಯಕುಮಾರ ಗಡ್ಡಿ.**
**ಉದ್ಯಮಿ.**

## 'ಗಾಂಧಿ ಭಾರತ' ಕಾರ್ಯಕ್ರಮ ಲಾಂಛನ ಅನಾವರಣ



**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಬೆಳಗಾವಿ ಚಳಿಗಾಲದ ಅಧಿವೇಶನದ ಮೊದಲ ದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹಾತ್ಮ ಗಾಂಧಿ ಅವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ಪ್ರಸಕ್ತ ವರ್ಷದುದ್ದಕ್ಕೂ ಆಯೋಜಿಸಿರುವ 'ಗಾಂಧಿಭಾರತ' ಕಾರ್ಯಕ್ರಮದ ಲಾಂಛನವನ್ನು ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಅನಾವರಣಗೊಳಿಸಿದರು.

ಬೆಳಗಾವಿಯಲ್ಲಿ ಡಿಸೆಂಬರ್ 26 ಹಾಗೂ 27ರಂದು ಗಾಂಧಿ ಭಾರತ ಕಾರ್ಯಕ್ರಮಕ್ಕೆ ಚಾಲನೆ ದೊರೆಯಲಿದೆ. 2025ರ ಅಕ್ಟೋಬರ್ 2ರವರೆಗೆ ರಾಜ್ಯದಾದ್ಯಂತ ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. 1924ರಲ್ಲಿ ಬೆಳಗಾವಿಯಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನಕ್ಕೆ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಏಕೈಕ ಅಧಿವೇಶನ ಎಂಬ ಹಿರಿಮೆ ಇದೆ. ಈ ಸಂದರ್ಭದಲ್ಲಿ ಗಾಂಧೀಜಿಯವರ ಬದುಕು, ಹೋರಾಟ, ಸ್ವಾತಂತ್ರ್ಯ ಚಳುವಳಿ ಕುರಿತು ಮಕ್ಕಳು, ಯುವಜನರು ಸೇರಿದಂತೆ ಎಲ್ಲಾ ವಯೋಮಾನದ ಜನರಲ್ಲಿ ದೇಶಾಭಿಮಾನ, ಸತ್ಯ, ಅಹಿಂಸೆ, ಆರ್ಥಿಕ ಚಿಂತನೆಗಳು, ಸ್ವರಾಜ್, ಅಸ್ಪೃಶ್ಯತೆ ನಿವಾರಣೆ ಮತ್ತಿತರ ವಿಚಾರಗಳ ಮೇಲೆ ಬೆಳಕು ಚೆಲ್ಲುವ ಕಾರ್ಯಕ್ರಮಗಳನ್ನು ಸರ್ಕಾರ ಆಯೋಜಿಸುತ್ತಿದೆ.

ಈ ಸಂದರ್ಭದಲ್ಲಿ, ವಿಧಾನ ಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್ ಫರೀದ್, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಡಾ. ಜಿ. ಪರಮೇಶ್ವರ, ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಆರ್. ಹೆಬ್ಬಾಳ್ಕರ್, ರಾಜ್ಯ ಸರ್ಕಾರದ ದೆಹಲಿ ಪ್ರತಿನಿಧಿ ಟಿ.ಬಿ. ಜಯಚಂದ್ರ, ಶಾಸಕರಾದ ಬಸವರಾಜ ರಾಯರೆಡ್ಡಿ, ಚನ್ನರಾಜ ಹಟ್ಟಿಹೊಳಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

### 'ಜನಪದ ಸಂಭ್ರಮ' ಉದ್ಘಾಟಿಸಿದ ಕನ್ನಡ, ಸಂಸ್ಕೃತಿ ಇಲಾಖೆಯ ವೀರಯ್ಯಸ್ವಾಮಿ ಹಿರೇಮಠ ಅಭಿಮತ

# ಮಕ್ಕಳಿಗೆ ಪುಸ್ತಕ ಓದುವ ಹವ್ಯಾಸ ಬೆಳೆಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ನಮ್ಮ ನೆಲದ ಸಂಸ್ಕೃತಿ, ಸಂಸ್ಕಾರ, ಸಾಹಿತ್ಯ, ಸಂಗೀತ ಮುಂತಾದ ಕಲೆಗಳ ಬಗ್ಗೆ ಮಕ್ಕಳಲ್ಲಿ ಅಸಕ್ತಿ ಮೂಡಿಸುವ ಕೆಲಸವನ್ನು ಪಾಲಕರು ಮಾಡಬೇಕು. ಸಾಂಸ್ಕೃತಿಕ ಮನೋಭಾವ ಬೆಳೆಸುವುದರಿಂದ ಮಕ್ಕಳ ವ್ಯಕ್ತಿತ್ವ ಸರ್ವಾಂಗೀಣವಾಗಿ ರೂಪಗೊಳ್ಳುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ.ಹಿರೇಮಠ ಹೇಳಿದರು.

ಅವರು ನಗರದ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಲಕ್ಕುಂಡಿಯ ಶ್ರೀನುಲಿ ಚಂದಯ್ಯ ಜಾನಪದ ಕಲಾ ಮೇಳ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಬೆಂಗಳೂರ ಇವರ ಸಹಯೋಗದಲ್ಲಿ ಅಯೋಜಿಸದ್ದ ಜನಪದ ಸಂಭ್ರಮ–2024 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.



ಮೊಬೈಲ್ ಗೀಳಿನಿಂದ ಇಂದಿನ ಮಕ್ಕಳು ಚಟುವಟಿಕೆರಹಿತರಾಗುತ್ತಿದ್ದಾರೆ, ಪಾಶ್ಚಾತ್ಯ ಸಂಸ್ಕೃತಿಯತ್ತ ವಾಲುತ್ತಿದ್ದಾರೆ. ಹೀಗಾಗಿ ಮಕ್ಕಳ ಕೈಗೆ ಮೊಬೈಲ್ ಕೊಡಬೇಡಿ, ಬದಲಾಗಿ ಪುಸ್ತಕ ಓದುವ ಹವ್ಯಾಸ ಬೆಳೆಸಬೇಕು ಎಂದರು.

ಅತಿಥಿಗಳಾಗಿ ಪಾಲ್ಗೊಂಡ ವೈದ್ಯರು ಹಾಗೂ ಸಾಹಿತಿಗಳಾದ ಡಾ. ಕಲ್ಲೇಶ ದೇ.ಮೂರುಸಿಳ್ಳಿನ ಜನಪದ ಸಾಹಿತ್ಯ ಬೆಳೆದು ಬಂದ ಕುರಿತು ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ವಿಘ್ನೇಶ್ವರ ಸೇವಾ ಸಮೀತಿಯ ಅಧ್ಯಕ್ಷ ರವೀಂದ್ರರಡ್ಡಿ ಪ.ಇನಾಮತಿ ಕಾರ್ಯಕ್ರಮದ ಕುರಿತು ಮಾತನಾಡಿದರು.

ಅತಿಥಿಗಳಾಗಿ ವಿಘ್ನೇಶ್ವರ ಸೇವಾ ಸಮೀತಿಯ ಕಾರ್ಯದರ್ಶಿ ಪ್ರಕಾಶ ಬೆಂತೂರ, ಸರಕಾರಿ ನಿವೃತ್ತ ನೌಕರರಾದ ಸಂಗನಗೌಡ ಕ.ಖಂಡಪ್ಪಗೌಡ್ರ, ಜೈಶ್ರೀರಾಮ ವಾಯು ವಿಹಾರ ಸಂಘದ ಸದಸ್ಯ ಸಂಗಮೇಶ ಕಟಗೇರಿ, ವಿಘ್ನೇಶ್ವರ ದೇವಸ್ಥಾನದ ಅರ್ಚಕರಾದ ಬಸಯ್ಯಸ್ವಾಮಿ ಹಿರೇಮಠ ಉಪಸ್ಥಿತರಿದ್ದರು.

ನಂತರ ಶಿಲ್ಪಾ ಕುರಟ್ಟಿ ಮತ್ತು ತಂಡದವರಿಂದ ಸುಗಮ ಸಂಗೀತ, ಬಸವರಾಜ ಅಡವಳ್ಳಿ ಮತ್ತು ತಂಡದವರಿಂದ ವಚನ ಸಂಗೀತ, ಪ್ರಕಾಶ ಚಂದನ್ನವರ ಮತ್ತು ತಂಡದವರಿಂದ ದೀಪ ನೃತ್ಯ, ಪ್ರಕಾಶ ಕುರಬರ ಮತ್ತು ತಂಡದವರಿಂದ ಡೊಳ್ಳು ಕುಣಿತ, ಸಾವಿತ್ರಿ ಲಮಾಣಿ ಮತ್ತು ತಂಡದವರಿಂದ ಜನಪದ ಗೀತೆ, ಸೋಮು ಚಿಕ್ಕಮಠ ಮತ್ತು ತಂಡದವರಿಂದ ಲಂಬಾಣಿ ನೃತ್ಯ, ಚಿದಾನಂದ ಅನವಾಳ ಮತ್ತು ತಂಡದವರಿಂದ ಭಜನೆ, ರಾಜೇಶ್ವರಿ ಕಲಾಕುಟೀರ ಮತ್ತು ತಂಡದವರಿಂದ ಜನಪದ ನೃತ್ಯ, ಮಲ್ಲಿಕಾರ್ಜುನ ಭಜೆಂತ್ರಿ ಮತ್ತು ತಂಡದವರಿಂದ ಕರಡಿ ಮಜಲು, ಭೀಮಪ್ಪ ಭಜೆ–ಂತ್ರಿ ಮತ್ತು ತಂಡದವರಿಂದ ಸಂಪುದಾಯ ವಾದನ, ಗೌಡಪ್ಪ ಬೊಮ್ಮಪ್ಪನವರ ತಂಡದವರಿಂದ ಕೋಲಾಟ, ಕೊಟ್ರೇಶ ಚನ್ನಳ್ಳಿ ತಂಡದವರಿಂದ ಜನಪದ ಗೀತೆ, ನಿಂಗಪ್ಪ ಗುಡ್ಡದ ತಂಡದವರಿಂದ ಡೊಳ್ಳುಪದ, ಬಸವರಾಜ ಈರಣ್ಣವರ ತಂಡದವರಿಂದ ತತ್ವಪದ, ರೂಪಾಬಾಯಿ ಧಡೇದ ತಂಡದವರಿಂದ ಜನಪದ ನೃತ್ಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಸಾವಿತ್ರಿ ಲಮಾಣಿ ಪ್ರಾರ್ಥಿಸಿದರು. ಶ್ರೀನುಲಿ ಚಂದಯ್ಯ ಜಾನಪದ ಕಲಾ ಮೇಳದ ಅಧ್ಯಕ್ಷ ಶಿವು ಭಜೆಂತ್ರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗೌಡಪ್ಪ ಬೊಮ್ಮಪ್ಪವರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಪತ್ರಕರ್ತ ಹಾಗೂ ಹವ್ಯಾಸಿ ರಂಗಕಲಾವಿದ ಮೌನೇಶ ಸಿ.ಬಡಿಗೇರ (ನರೇಗಲ್ಲ) ಮಾತನಾಡಿ, ಕಲೆ, ಸಂಸ್ಕೃತಿ, ಪರಂಪರೆ ಉಳಿಸಿ–ಬೆಳೆಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅನೇಕ ಯೋಜನೆಗಳನ್ನು ಜಾರಿಗೊಳಿಸಿದೆ. ಧನ ಸಹಾಯದ ಮೂಲಕ ಕಲೆ, ಕಲಾವಿದರು ಹಾಗೂ ಸಂಘಟನೆಗಳನ್ನು ಪ್ರೋತ್ಸಾಹಿಸುತ್ತಿದೆ. ಇಲಾಖೆಯ ಯೋಜನೆಗಳನ್ನು ಪ್ರಾಮಾಣಿಕವಾಗಿ ಅನುಷ್ಠಾನಗೊಳಿಸುವ ಮೂಲಕ ಗದಗ ಜಿಲ್ಲೆಯ ಸಹಾಯಕ ನಿರ್ದೇಶಕರಾದ ವೀರಯ್ಯಸ್ವಾಮಿ ಹಿರೇಮಠರು ಕಲಾವಿದರು ಹಾಗೂ ಸಾಂಸ್ಕೃತಿಕ ಸಂಘಟಕರನ್ನು ಪ್ರೊತ್ಸಾಹಿಸುತ್ತಿದ್ದಾರೆ ಎಂದರು.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ ಹೃದಯದಿಂದ ಕೇಳಿಸಿಕೊಳ್ಳಿ

–ಸುಭಾಷಿತ

## ಸಂಪಾದಕೀಯ

# ಉತ್ತರದ ಬಗ್ಗೆ ಚರ್ಚೆ ನಡೆಯಲಿ

ಕರ್ನಾಟಕ ವಿಧಾನಮಂಡಲದ ಚಳಿಗಾಲದ ಅಧಿವೇಶನ ಆರಂಭವಾಗಿದೆ. ಕುಂದಾನಗರಿಯ ಸುವರ್ಣ ವಿಧಾನಸೌಧದಲ್ಲಿ ಸೋಮವಾರ ಅಧಿವೇಶನಕ್ಕೆ ವಿದ್ಯುಕ್ತ ಚಾಲನೆ ನೀಡಲಾಗಿದ್ದು, ಅನೇಕ ಮಸೂದೆಗಳು ಮತ್ತು ಉತ್ತರ ಕರ್ನಾಟಕದ ಅಭಿವೃದ್ಧಿ ವಿಷಯವಾಗಿ ಮಹತ್ವಪೂರ್ಣ ಚರ್ಚೆ ನಡೆಯುವ ವಿಶ್ವಾಸ ಮೂಡಿಸಿದೆ. ಸಭಾಧ್ಯಕ್ಷ ಯು.ಟಿ. ಖಾದರ್, ಸಭಾಪತಿ ಬಸವರಾಜ ಹೊರಟ್ಟಿ ಸಹ ಉತ್ತರ ಕರ್ನಾಟಕ ಬಗ್ಗೆ ಚರ್ಚೆಗೆ ಅವಕಾಶ ನೀಡುವುದಾಗಿ ತಿಳಿಸಿದ್ದಾರೆ.

ಆದರೆ ಆಡಳಿತ ಮತ್ತು ಪ್ರತಿಪಕ್ಷಗಳಿಗೂ ಸಹ ಉತ್ತರದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆಗೆ ಅಷ್ಟೆ ಆಸಕ್ತಿ ಇರಬೇಕು. ಆಡಳಿತ ಮತ್ತು ಪ್ರತಿಪಕ್ಷದವರು ಚರ್ಚೆಗೆ ಅವಕಾಶ ಕೇಳದಿದ್ದರೆ, ಸಭಾಧ್ಯಕ್ಷರು, ಸಭಾಪತಿಗಳು ತಾವಾಗಿಯೇ ಚರ್ಚೆಗೆ ಅನುವು ಮಾಡಿಕೊಡಲು ಸಾಧ್ಯವಿಲ್ಲ ಎನ್ನುವುದು ಎಲ್ಲರಿಗೂ ಗೊತ್ತಿರುವ ವಿಚಾರವೇ.

ಅಧಿವೇಶನದಲ್ಲಿ ಸರಕಾರವನ್ನು ಕಟ್ಟಿಹಾಕಲು ಪ್ರತಿಪಕ್ಷಗಳು ತಂತ್ರ ರೂಪಿಸಿವೆ. ಹೀಗಾಗಿ ಚರ್ಚೆ ಈ ಬಾರಿ ಅರ್ಥಪೂರ್ಣವಾಗಿ ನಡೆಯುತ್ತೊ ಅಥವಾ ಅಬ್ಬರದ ಮಾತಿಗಷ್ಟೆ ಸೀಮಿತವಾಗುತ್ತದೆಯೊ ನೋಡಬೇಕಾಗಿದೆ. ವಿಷಯ ಏನೇ ಇರಲಿ, ಈ ಬಾರಿ ಉತ್ತರ ಕರ್ನಾಟಕ ಸಮಸ್ಯೆ ಬಗ್ಗೆ ಅಧಿವೇಶನದ ಆರಂಭದಲ್ಲಿಯೇ ಚರ್ಚೆ ಆಗಬೇಕು.

ಪ್ರತಿಪಕ್ಷಗಳ ರಾಜಕೀಯ ಕಾರಣಗಳನ್ನು ಮುಂದಿಟ್ಟುಕೊಂಡು ಸರಕಾರವನ್ನು ಟೀಕಿಸುವ ಭರದಲ್ಲಿ ಸಭಾತ್ಯಾಗ, ಹೋರಾಟ ಆರಂಭಿಸುವ ಮುನ್ನವೇ ಉತ್ತರ ಕರ್ನಾಟಕ ಬಗ್ಗೆ ಚರ್ಚೆ ಆಗಬೇಕು. ಇಲ್ಲಿನ ಸಮಸ್ಯೆಗಳ ಪರಿಹಾರಕ್ಕೆ ತಾರ್ಕಿಕ ಅಂತ್ಯ ಸಿಗುವಂಥ ಅರ್ಥಪೂರ್ಣ ವಿಷಯಗಳು ಮಂಡನೆಯಾಗಬೇಕು. ಕಾರ್ಯರೂಪಕ್ಕೆ ಬರುವಂಥ ನೀತಿ ನಿರ್ಧಾರಗಳನ್ನು ಕೈಗೊಳ್ಳುವಂತಾಗಬೇಕು.

ಸದ್ಯ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಅಧಿವೇಶನದ ಆರಂಭದಲ್ಲಿ ಇಲ್ಲವೇ ಕೊನೆಯ ಭಾಗದಲ್ಲಿ ಚರ್ಚೆಗೆ ಅವಕಾಶ ನೀಡಲಾಗುವುದು ಎಂದಿದ್ದಾರೆ. ಆದರೆ ಯಾವುದೇ ಕಾರಣಕ್ಕೂ ಅಧಿವೇಶನದ ಕೊನೆಯ ಭಾಗದಲ್ಲಿ ಚರ್ಚೆಗೆ ಅವಕಾಶ ನೀಡದೆ, ಆರಂಭದಲ್ಲಿಯೇ ಅವಕಾಶ ನೀಡಬೇಕು.

ಉತ್ತರ ಕರ್ನಾಟಕ ಭಾಗದಲ್ಲಿರುವ ಆಡಳಿತ ಪಕ್ಷದ ಸಚಿವರು, ಶಾಸಕರು ಮತ್ತು ಪ್ರತಿಪಕ್ಷದಲ್ಲಿರುವ ಬಿಜೆಪಿ ಶಾಸಕರು ಇದಕ್ಕೆ ದನಿಗೂಡಿಸಬೇಕು. ಅಧಿವೇಶನದ ಆರಂಭದಲ್ಲಿಯೇ ಉತ್ತರದ ವಿಷಯಗಳು ಚರ್ಚೆಗೆ ಬಂದಲ್ಲಿ, ಈ ಭಾಗದ ಜನರ ಸಮಸ್ಯೆಗಳಿಗೆ ಜನಪ್ರತಿನಿಧಿಗಳು ಎನಿಸಿಕೊಂಡವರು ಒಂದಷ್ಟಾದರೂ ಸ್ಪಂದಿಸಿದ ಸಮಾಧಾನ ದೊರೆಯುತ್ತದೆ




ಬೆಳಗಾವಿಯ ಸುವರ್ಣ ಸೌಧ ಗೇಟ್ ಮುಂಭಾಗ ನುಡಿದಂತೆ ನಡೆದ ಸರಕಾರ ಮತ್ತು ಐದು ಗ್ಯಾರಂಟಿ ಯೋಜನೆಗಳ ಕುರಿತು ವಿದ್ಯುತ್ ಅಲಂಕಾರ ಗಮನಸೆಳೆಯುತ್ತಿದೆ.

# 'ಯುವ ಜನೋತ್ಸವ'ದಲ್ಲಿ ಪ್ರಶಸ್ತಿ




■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಯುವಕರಲ್ಲಿ ಕಲಾಸಕ್ತಿ ಬೆಳೆಸುವ ಉದ್ದೇಶದಿಂದ ಪ್ರತಿವರ್ಷ ಪದವಿ ವಿದ್ಯಾರ್ಥಿಗಳಿಗೆ ಯುವಜನೋತ್ಸವವನ್ನು ಏರ್ಪಡಿಸುತ್ತಿದೆ. ಅದರಂತೆ ಪ್ರಸ್ತುತ ವರ್ಷ ವಲಯ ಮಟ್ಟದ ಯುವಜನೋತ್ಸವವನ್ನು ಆದರ್ಶ ಶಿಕ್ಷಣ ಸಮಿತಿಯ ಕಾಮರ್ಸ್ ಕಾಲೇಜಿನಲ್ಲಿ ಏರ್ಪಡಿಸಲಾಗಿತ್ತು.

ಈ ಸ್ಪರ್ಧೆಯಲ್ಲಿ ವಿಜಯ ಲಲಿತಕಲಾ ಕಾಲೇಜಿನ ವಿದ್ಯಾರ್ಥಿಗಳು ಹತ್ತು ವಿಭಾಗದಲ್ಲಿ ಭಾಗವಹಿಸಿ ಏಳು ವಿಭಾಗದಲ್ಲಿ ಪ್ರಶಸ್ತಿ ಗಳಿಸಿ ವಿಶ್ವ ವಿದ್ಯಾಲಯ ಧಾರವಾಡದಲ್ಲಿ ನಡೆಯುವ ಯುವ ಜನೋತ್ಸವಕ್ಕೆ ಆಯ್ಕೆಯಾಗಿದ್ದಾರೆ.

ಕೋಲಾಜ್ ಪೇಂಟಿಂಗನಲ್ಲಿ ವೀರೇಶ ವಡ್ಡಟ್ಟಿಮಠ ದ್ವಿತೀಯ, ಸ್ಪಾಟ್ ಪೇಂಟಿಂಗ್‌ನಲ್ಲಿ ಗಣೇಶ ಬದಿ ಪ್ರಥಮ, ರಂಗೋಲಿಯಲ್ಲಿ ಕಾರ್ತಿಕ್ ಬಡಿಗೇರ, ಪೋಸ್ಟರ್ ಮೇಕಿಂಗ್‌ನಲ್ಲಿ ಗಿರೀಶ ಸಿಳ್ಳಿ ಪ್ರಥಮ, ಕಾರ್ಟೂನ್ ಸ್ಪರ್ಧೆಯಲ್ಲಿ ಆಕಾಶ ಕೊಂಗಟಿ ತೃತೀಯ, ಸ್ಪಾಟ್ ಫೋಟೊಗ್ರಾಫಿ ದ್ವಿತೀಯ, ಇನ್ಸ್ಟಾಲೇಶನ್, ಬಸವರಾಜ ಗೌಡರ, ಆಕಾಶ, ಗಿರೀಶ, ಕಾರ್ತಿಕ್ ಭಾಗವಹಿಸಿ ಪ್ರಶಸ್ತಿ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಈ ಎಲ್ಲ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷ ಪ್ರೊ. ಅಶೋಕ ಅಕ್ಕಿ, ಕಾರ್ಯದರ್ಶಿ ಪ್ರೊ. ಸಂತೋಷ ಅಕ್ಕಿ, ಡಾ. ಸಿ.ವಿ. ಬಡಿಗೇರ, ಪ್ರೊ. ಎಸ್.ವಿ. ಗುಂಜಾಳ, ಬಿ.ಸಿ. ಕುತ್ನಿ, ಬಿ.ಜಿ. ನೆಲಜೇರಿ ಅಭಿನಂದಿಸಿದ್ದಾರೆ.

### ಗಂಗಾವತಿ ಪ್ರಾಣೇಶ ತಂಡದವರ 'ಹಾಸ್ಯ ಸಂಜೆ' ಕಾರ್ಯಕ್ರಮದಲ್ಲಿ ಫಕ್ಕೀರಪ್ಪ ಹೆಬಸೂರ

# ಅವಕಾಶವಾದಾಗಲೆಲ್ಲ ನಗುವನ್ನು ಅಸ್ವಾದಿಸಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಮೊಬೈಲ್, ಟಿವಿ ಬಂದನಂತರ ಎಲ್ಲರೂ ನಗುವದನ್ನು ಕಡಿಮೆ ಮಾಡಿದ್ದಾರೆ. ನಗುವುದರಿಂದ ದೇಹವು ಸದೃಢವಾಗಿರುತ್ತದೆ. ಅವಕಾಶ ಸಿಕ್ಕಾಗಲೆಲ್ಲ ನಗುವನ್ನು ಅಸ್ವಾದಿಸಬೇಕು ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಹೇಳಿದರು.

ನಗರದ ಬಯಲು ಆಂಜನೇಯ ದೇವಸ್ಥಾನದ ಆವರಣದಲ್ಲಿ ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ಹಾಗೂ ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾ ಘಟಕದ ಸಂಯುಕ್ತ ಆಶ್ರಯದಲ್ಲಿ ಜರುಗಿದ ಹಾಸ್ಯ ಸಂಜೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ಕುರುಬರ ಸಮಾಜದ ಜೋಡೆತ್ತುಗಳಾದ ಕನಕಭವನ ಹಾಗೂ ಡಿ. ದೇವರಾಜ ಅರಸು ವಸತಿ ನಿಲಯ ಕಳೆದ 15 ವರ್ಷಗಳಿಂದ ಹಲವಾರು ಸಾಮಾಜಿಕ ಹಾಗೂ ಧಾರ್ಮಿಕ ಕಾರ್ಯಗಳನ್ನು ಮತ್ತು ಸಮಾಜಮುಖಿ ಕಾರ್ಯಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. 2001ರಲ್ಲಿ ಸ್ಥಾಪನೆಗೊಂಡ ಈ ಸಂಸ್ಥೆಗೆ ಸ್ಫೂರ್ತಿಯಾಗಿ ನಿಂತವರು ಮುಖ್ಯಮಂತ್ರಿ ಸಿದ್ದರಾಮಯ್ಯನವರು. ಈ ಸಂಸ್ಥೆ ವತಿಯಿಂದ ಜಿಲ್ಲೆಯ ಬಡ ಹಾಗೂ ಪ್ರತಿಭಾವಂತ ಮಕ್ಕಳಿಗಾಗಿ ವಿದ್ಯಾರ್ಥಿಗಳ ಮೆಟ್ರಿಕ್ ಪೂರ್ವ,



ಮೆಟ್ರಿಕ್ ನಂತರ ಹಾಗೂ ವೃತ್ತಿಪರ ವಸತಿ ನಿಲಯಗಳನ್ನು ಮುನ್ನಡೆಸುತ್ತಾ ಬಂದಿದೆ.

ಕೌಶಲ್ಯ ತರಬೇತಿ ಕೇಂದ್ರವನ್ನು ಮುನ್ನಡೆಸಿ ಸುಮಾರು 500ಕ್ಕೂ ಹೆಚ್ಚು ನಿರುದ್ಯೋಗ ಯುವಕ-ಯುವತಿಯರು ಸ್ವಾವಲಂಬಿಗಳಾಗಿ ಜೀವನ ನಡೆಸಲು ವಿವಿಧ ಕೌಶಲ್ಯಾಧಾರಿತ ತರಬೇತಿಗಳನ್ನು ನೀಡಲಾಗಿದೆ. ಈ ಸಂಸ್ಥೆ ವತಿಯಿಂದ ಪೂರ್ವ ಪ್ರಾಥಮಿಕ, ಆಂಗ್ಲ ಮಾಧ್ಯಮ, ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆಗಳು ಹಾಗೂ ಐಟಿಐ ಕಾಲೇಜು ಕಳೆದ 6 ವರ್ಷಗಳಿಂದ ನಡೆಸಲಾಗುತ್ತಿದೆ. ನೂತನವಾಗಿ 100 ಸಂಖ್ಯಾಬಲದ ವಿದ್ಯಾರ್ಥಿನಿಯರ ವಸತಿ ನಿಲಯ ಪ್ರಾರಂಭಿಸಲಾಗಿದೆ. ಈ ಸಂಸ್ಥೆಯ ಏಳ್ಗೆಗಾಗಿ ಶಶಿಧರ ರೊಳ್ಳಿ, ನಿಂಬನಾಯ್ಕರ, ಭಾವಿಕಟ್ಟಿ, ಶಿಂಗಟಾಲಕೇರಿ, ಬಾನಾಪೂರ, ಜಡದೇಲಿ ಹಾಗೂ ಸ್ಥಳೀಯರಾದ ಮ್ಯಾಗೇರಿ, ಆದಪ್ಪಗೌಡರ, ಅಕ್ಕಿ ಮುಂತಾದವರು ಸಹಕರಿಸಿದ್ದಾರೆ ಎಂದು ಹೇಳಿದರು.

ಡಿಡಿಪಿಐ ಅರ್.ಎಸ್. ಬುರಡಿ ಮಾತನಾಡಿ, ಗಂಗಾವತಿ ಪ್ರಾಣೇಶ ತಂಡದ ಹಾಸ್ಯ ಸಂಜೆ ಎಂದರೆ ಅದು ಹಾಸ್ಯದ ಹಬ್ಬವಾಗಿರುತ್ತದೆ. ಅವರ ಭಾಷಣದ ವಸ್ತುಗಳನ್ನು ಮಕ್ಕಳಿಗೆ ಪ್ರೇರಣಾತ್ಮಾಕವಾಗಿ ಹೇಳಲಾಗುತ್ತದೆ. ಇದರಿಂದ ಸಾಕಷ್ಟು ಮಕ್ಕಳು ಉತ್ತೇಜನಗೊಂಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಶಿಧರ ರೊಳ್ಳಿ, ಎಸ್. ಕೆ. ಮ್ಯಾಗೇರಿ, ಬೆಟಗೇರಿ ಪಿಎಸ್‌ಐ ಲಕ್ಷ್ಮಣ ಅರಿ, ರೋಣ ಪಿಎಸ್‌ಐ ಪ್ರಕಾಶ ಬಣಕಾರ, ಟ್ರಾಫಿಕ್ ಪಿಎಸ್‌ಐ ಶಕುಂತಲಾ ನಾಯಕ, ನಿವೃತ್ತ ಮುಖ್ಯ ಗುರುಗಳಾದ ಬಿ.ಎಚ್. ಹ್ಯಾಟಿ, ಕಾಳಿದಾಸ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಿ.ಬಿ. ಬಾವಿಕಟ್ಟಿ, ಬಸವರಾಜ ಮಲ್ಲೂರ, ಗುತ್ತಿಗೆದಾರರಾದ ನಾಗರಾಜ ಮಾಗಡಿ, ಎಸ್.ಕೆ. ಮಾಗೇರಿ ಮುಂತಾದವರು ಉಪಸ್ಥಿತರಿದ್ದರು.

ನಂತರ ಗಂಗಾವತಿ ಪ್ರಾಣೇಶ, ನರಸಿಂಹ ಜೋಶಿ, ಬಸವರಾಜ ಮಹಾಮನಿ ಅವರಿಂದ ಹಾಸ್ಯ ಸಂಜೆ ಜರುಗಿತು.

ವೈ.ಬಿ. ಬಾಣಾಪೂರ ಸ್ವಾಗತಿಸಿದರು. ವೈ.ಬಿ. ಜಡದೆಲಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ. ಬಸವರಾಜ ಲದ್ದಿ ನಿರೂಪಿಸಿದರು. ಪ್ರಾಚಾರ್ಯ ರಮೇಶ ವಡವಿ ವಂದಿಸಿದರು.

ಉದ್ಯಮಿ ಪ್ರಕಾಶ ಕರಿ ಮಾತನಾಡಿ, ಕುರುಬರ ಸಂಘದ ಅಡಿಯಲ್ಲಿ ರಾಕೇಶ್ ಸಿದ್ದರಾಮಯ್ಯ ಟ್ರಸ್ಟ್ ವತಿಯಿಂದ ಸಾಕಷ್ಟು ಉತ್ತಮ ಕಾರ್ಯಚಟುವಟಿಕೆಗಳು ನಡೆಯುತ್ತಿವೆ. ಇಂದಿನ ದಿನಗಳಲ್ಲಿ ಎಲ್ಲರಲ್ಲಿ ನಗು ಮರೆಯಾಗುತ್ತಿದೆ. ಒತ್ತಡದ ಬದುಕಿನಿಂದ ದೂರಾಗಿ ಹಾಸ್ಯ ಸಂಜೆ ಕಾರ್ಯಕ್ರಮವನ್ನು ಸವಿಯಬೇಕು ಎಂದು ಹೇಳಿದರು.

# ಅನಧಿಕೃತ ಔಷಧ ಅಂಗಡಿಗಳ ವಿರುದ್ಧ ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ರಾಜ್ಯದಲ್ಲಿ ಔಷಧ ಪರವಾನಗಿ ಇಲ್ಲದೆ ಅನಧಿಕೃತವಾಗಿ ಔಷಧ ಅಂಗಡಿಗಳನ್ನು ನಡೆಸುತ್ತಿರುವುದು ಕಂಡು ಬಂದಲ್ಲಿ ಅಂತಹವರ ವಿರುದ್ಧ ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ ಮತ್ತು ನಿಯಮಾವಳಿಗಳನ್ವಯ ಕ್ರಮಕೈಗೊಳ್ಳಲಾಗುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಅವರು ವಿಧಾನ ಪರಿಷತ್‌ನಲ್ಲಿ ಸದಸ್ಯ ಗೋವಿಂದ ರಾಜು ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು. ರಾಜ್ಯದಲ್ಲಿ ಪ್ರಸ್ತುತ 37,130 ಖಾಸಗಿ ಔಷಧ ಮಳಿಗೆಗಳು ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರಿ ಆಸ್ಪತ್ರೆ ಆವರಣದಲ್ಲಿ 7 ಜತನಾ ಬಜಾರ್‌ಗಳು, 23 ಸಂಜೀವಿನಿ ಕೇಂದ್ರಗಳು ಹಾಗೂ 178 ಜನೌಷಧಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದರು. 2023–24ರಲ್ಲಿ ದೈನಂದಿನ ಪರಿವೀಕ್ಷಣೆಯಲ್ಲಿ ಇಲಾಖೆಯ ಅಧಿಕಾರಿಗಳು ನಿಯಮಗಳನ್ನು ಉಲ್ಲಂಘಿಸಿದ 1245 ಪರವಾನಿಗೆಗಳನ್ನು ಅಮಾನತುಗೊಳಿಸಿದ್ದು, 292 ಪರವಾನಿಗೆಗಳನ್ನು ರದ್ದುಗೊಳಿಸಲಾಗಿದೆ.

ಇಲಾಖೆಯ ಅಧಿಕಾರಿಗಳು ಮಾದಕ ಔಷಧಿಗಳ ದಾಸ್ತಾನು ಮತ್ತು ಮಾರಾಟಗಳ ಬಗ್ಗೆ ನಿಗಾವಹಿಸುತ್ತಿದ್ದು, ಇಲಾಖೆಯಲ್ಲಿ ಪ್ರತಿ ವರ್ಷ ಮಾದಕ ವಸ್ತುಗಳ ದುರ್ಬಳಕೆಯನ್ನು ತಡೆಗಟ್ಟಲು 3 ದಿನ ವಿಶೇಷ ಪರೀಕ್ಷಾರ್ಥ ಪರಿವೀಕ್ಷಣೆ ಕೈಗೊಂಡು ಉಲ್ಲಂಘನೆ ಕಂಡುಬಂದ ಸಂಸ್ಥೆಗಳ ವಿರುದ್ಧ ಕ್ರಮ ಜರುಗಿಸಲಾಗುತ್ತಿದೆ ಎಂದರು.

ಔಷಧ ನಿಯಂತ್ರಣ ಇಲಾಖೆಯಲ್ಲಿ ಒಟ್ಟು 112 ಔಷಧ ಪರಿವೀಕ್ಷಕರ ಹುದ್ದೆಗಳಲ್ಲಿ 08 ಹುದ್ದೆಗಳು ಮಾತ್ರ ಭರ್ತಿಯಾಗಿದೆ. ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಒಟ್ಟು 83 ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದ್ದು, ನೇಮಕಾತಿ ಸಂಬಂಧಿಸಿದ ಪ್ರಕರಣವು ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿದೆ. ಪ್ರಕರಣದ ಇತ್ಯರ್ಥವಾದ ನಂತರ ಭರ್ತಿ ಮಾಡಲಾಗುವುದು ಎಂದರು.

### 'ಅತ್ತ ದರಿ–ಇತ್ತ ಪುಲಿ' ಎನ್ನುವಚಿತಾದ ರೈತರ ಪರಿಸ್ಥಿತಿ

# ಗೆಜ್ಜೆಶೇಂಗಾ ಖರೀದಿ ಬೆಲೆಯಲ್ಲಿ ಕುಸಿತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರ ಮುಂಗಾರಿನ ಆಶಾದಾಯಕ ವಾಣಿಜ್ಯ ಬೆಳೆ ಗೆಜ್ಜೆಶೇಂಗಾ ಬೆಲೆಯಲ್ಲಿ ಇದೀಗ ದಿನೇದಿನೇ ಕುಸಿತ ಕಾಣುತ್ತಿದ್ದು, ಶೇಂಗಾ ಬೆಳೆದ ರೈತ ಸಮುದಾಯವನ್ನು ನಿರಾಸೆ ಕಾಡತೊಡಗಿದೆ.

ಮುಂಗಾರಿನಲ್ಲಿ ಮಳೆ ಕೊರತೆಯಿಂದ ಶೇಂಗಾ ಇಳುವರಿ ಕುಂಠಿತಗೊಂಡಿದ್ದು, ಹರಸಾಹಸ ಪಟ್ಟು ಉಳಿಸಿಕೊಂಡು ಬೆಳೆಗೀಗ ಬೆಲೆ ಇಲ್ಲದಂತಾಗಿ ನಷ್ಟ–ಕಷ್ಟ ಅನುಭವಿಸುವಂತಾಗಿದೆ. ಪ್ರಸಕ್ತ ಹಂಗಾಮಿಗೆ ಲಕ್ಷ್ಮೇಶ್ವರ ಸೇರಿ ತಾಲೂಕಿನ ಅಕ್ಕಿಗುಂದ, ಬಟ್ಟೂರ, ಬಡ್ನಿ, ಸೂರಣಗಿ, ಬಾಲೆಹೊಸೂರ, ರಾಮಗೇರಿ, ಬಸಾಪುರ, ಯಳವತ್ತಿ, ಯತ್ನಳ್ಳಿ, ಅಡರಕಟ್ಟಿ, ಗೊಜನೂರ ಸೇರಿ 7200 ಹೆಕ್ಟೇರ್ ಜಮೀನಿನಲ್ಲಿ ಶೇಂಗಾ ಬಿತ್ತನೆಯಾಗಿದೆ.

ಸಕಾಲಿಕ ಮಳೆಯಾಗದೇ ಪ್ರತಿ ಎಕರೆಗೆ ಸರಾಸರಿ 15–20 ಚೀಲ ಬೆಳೆಯುವ ರೈತರು 5ರಿಂದ 10 ಚೀಲ ಬೆಳೆದಿದ್ದಾರೆ. ಈಗ ಬೆಲೆಯೂ ಕುಸಿತವಾಗಿರುವುದು ರೈತರ ಸಂಕಷ್ಟಕ್ಕೆ ಕೊನೆ ಇಲ್ಲದಂತಾಗಿದೆ. ನವೆಂಬರ್ ತಿಂಗಳು ಶೇಂಗಾ ಬೆಳೆ ಮಾರುಕಟ್ಟೆಗೆ ಬಂದ ಸಂದರ್ಭದಲ್ಲಿ ಪ್ರತಿ



ಕ್ವಿಂಟಲ್‌ಗೆ ಕನಿಷ್ಠ 3 ಸಾವಿರ, ಸರಾಸರಿ 5 ಸಾವಿರ ಗರಿಷ್ಠ 6500 ರೂ.ವರೆಗೂ ಮಾರಾಟವಾಗಿತ್ತು. ಇದೀಗ ಅದೇ ಬೆಳೆಗೆ ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಲ್‌ಗೆ 500ರಿಂದ 1000 ರೂ ಬೆಲೆ ಕುಸಿತವಾಗಿ ರೈತರನ್ನು ಚಿಂತೆಗೀಡು ಮಾಡಿದೆ.

ಲಕ್ಷ್ಮೇಶ್ವರದ ಎಪಿಎಂಸಿಯಲ್ಲಿ ಈ ತಿಂಗಳು 6122 ಕ್ವಿಂಟಲ್ ಶೇಂಗಾ ಮಾರಾಟವಾಗಿದೆ. ಸೋಮವಾರ 915 ಚೀಲ ಆವಕವಾಗಿದ್ದು, ಕನಿಷ್ಠ ದರ 2500, ಗರಿಷ್ಠ 6200 ಸರಾಸರಿ 4117ರಷ್ಟು ಮಾರಾಟವಾಗಿದೆ. ದರ ಕುಸಿತದ ಬಗ್ಗೆ ಶಿರಹಟ್ಟಿ ತಾಲೂಕಿನ ಮಾಗಡಿ ಗ್ರಾಮದ ರೈತ ಫಕ್ಕೀರಸಾಬ ನದಾಫ್ ಲಕ್ಷ್ಮೇಶ್ವರ ಎಪಿಎಂಸಿಗೆ ಶೇಂಗಾ ಮಾರಾಟಕ್ಕೆ ಬಂದ ಸಂದರ್ಭದಲ್ಲಿ ತಮ್ಮ ಅಸಮಾಧಾನ ಹಂಚಿಕೊಂಡು, ಜೀವನಾಡಿಗಳ ಆಹಾರಕ್ಕಾಗಿಯೇ ಬೆಳೆದ ಶೇಂಗಾ ಹೊಟ್ಟು ಅಕಾಲಿಕ ಮಳೆಗೆ ಹಾಳಾಗಿದೆ. ಮಾರುಕಟ್ಟೆಗೆ ಫಸಲು ತಂದ ಸ್ಥಿತಿ ಅತ್ತ ದರಿ–ಇತ್ತ ಪುಲಿ ಎನ್ನುವಂತಾಗಿ ಕೊನೆಗೆ ಕೈಗೆ ಬಂದ ದರಕ್ಕೆ ಮಾರಾಟ ಮಾಡಿ ಸಪ್ಪೆ ಮೋರೆ ಹಾಕಿ ಸಾಗುವಂತಾಗಿದೆ. ಪ್ರತಿ ಎಕರೆಗೆ ಖರ್ಚು ಮಾಡಿದ 25 ಸಾವಿರ ರೂ ಸಹ ರೈತರ ಕೈಗೆ ಸಿಗ್ಗದಂತಾಗಿದೆ ಎಂದರು.

ರೈತರ ಫಸಲಿಗೆ ಉತ್ತಮ ಬೆಲೆ ಒದಗಿಸುವ, ಸೂಕ್ತ ಕಾಲದಲ್ಲಿ ಬೆಂಬಲ ಬೆಲೆಯಡಿ ಖರೀದಿಸುವ ನಿಟ್ಟಿನಲ್ಲಿ ಸರ್ಕಾರಗಳು ರೈತಪರ ಕಾಳಜಿ ತೋರಬೇಕು. ರೈತರು ಬೆಳೆ ಮಾರಾಟ ಮಾಡಿದ ಮೇಲೆ ಬೆಂಬಲ ಖರೀದಿ ಕೇಂದ್ರಗಳು ಪ್ರಾರಂಭವಾಗುವುದು ಯಾವ ಉದ್ದೇಶಕ್ಕೆ ಎಂದು ರೈತ ಮುಖಂಡ ಶಿವಾನಂದ ಲಿಂಗಶೆಟ್ಟಿ ಅಸಮಾಧಾನ ವ್ಯಕ್ತಪಡಿಸಿದರು.

ಈ ಕುರಿತು ಲಕ್ಷ್ಮೇಶ್ವರ ಎಪಿಎಂಸಿ ಖರೀದಿದಾರರೊರ್ವರನ್ನು ಮಾತನಾಡಿಸಿದಾಗ, ಶೇಂಗಾ ಕಾಳಿನಲ್ಲಿ ಎಣ್ಣೆ ಪ್ರಮಾಣ ಕಡಿಮೆಯಿದೆ ಮತ್ತು ಗುಣಮಟ್ಟದ ಕೊರತೆಯಿದೆ. ಗುಜರಾತದಿಂದ ಉತ್ತಮ ಗುಣಮಟ್ಟದ ಶೇಂಗಾ ಹೆಚ್ಚಿನ ಪ್ರಮಾಣದಲ್ಲಿ ರಾಜ್ಯದ ಮಾರುಕಟ್ಟೆಗೆ ಬರುತ್ತಿದೆ. ಇದೀಗ ಬಿತ್ತನೆ ಬೀಜದ ಮಾರಾಟ/ಬೇಡಿಕೆ ಇಲ್ಲದ ಕಾರಣ ಎಲ್ಲ ಎಪಿಎಂಸಿಗಳಲ್ಲಿ ಬೆಲೆ ಕಡಿಮೆಯಾಗಿದೆ ಎಂದರು.

### ಲಾವಣಿ, ಗೀಗೀ ಪದ ತರಬೇತಿ ಶಿಬಿರದ ಪೂರ್ವ ಸಿದ್ಧತಾ ಸಭೆಯಲ್ಲಿ ಡಾ. ಜಿ.ಬಿ. ಪಾಟೀಲ

# ಮೂಲ ಕಲೆಗಳಲ್ಲಿ ಆಸಕ್ತಿ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಾನವೀಯ ಮೌಲ್ಯಗಳನ್ನ, ಸಮಾಜದಲ್ಲಿ ಸಾಮರಸ್ಯ ಹಾಗೂ ಸಹಬಾಳ್ವೆಯನ್ನು ಬೋಧಿಸುವ ಲಾವಣಿ ಹಾಗೂ ಗೀಗೀ ಪದಗಳ ಕಲೆಯನ್ನು ಉಳಿಸಿ ಬೆಳೆಸುವ ಕೆಲಸವಾಗಬೇಕು. ಇಂದಿನ ಯುವ ಕಲಾವಿದರು ನಮ್ಮ ನಾಡಿನ ಮೂಲ ಕಲೆಗಳಲ್ಲೊಂದಾದ ಲಾವಣಿ ಹಾಗೂ ಗೀಗೀ ಪದ ಕಲೆಯ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಹಿರಿಯ ಸಾಂಸ್ಕೃತಿಕ ಸಂಘಟಕ ಹಾಗೂ ಡಿಜಿಎಂ ಆಯುರ್ವೇದ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯ ಡಾ. ಜಿ.ಬಿ. ಪಾಟೀಲ ಹೇಳಿದರು.

ಅವರು ನಗರದ ಕನ್ನಡ ಸಾಹಿತ್ಯ ಪರಿಷತ್‌ನ ಜ.ತೋಂಟದಾರ್ಯ ಕನ್ನಡ ಭವನದಲ್ಲಿ ಕರ್ನಾಟಕ ಜಾನಪದ ಅಕಾಡೆಮಿ ಹಮ್ಮಿಕೊಳ್ಳಲಿರುವ ಲಾವಣಿ ಹಾಗೂ ಗೀಗೀ ಪದಗಳ ತರಬೇತಿ ಮತ್ತು ವಿಚಾರ ಸಂಕಿರಣ ಕಾರ್ಯಕ್ರಮದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಉಚಿತ ವಸತಿ,



ಊಟೋಪಚಾರದೊಂದಿಗೆ ನೀಡಲಿರುವ ಲಾವಣಿ ಹಾಗೂ ಗೀಗೀ ಪದಗಳ ತರಬೇತಿ ಶಿಬಿರದಲ್ಲಿ ಉದಯೋನ್ಮುಖ ಕಲಾವಿದರು ತರಬೇತಿ ಪಡೆದು, ತಂಡಗಳನ್ನು ಕಟ್ಟಿಕೊಂಡು ಕಲೆಯನ್ನು ಉಳಿಸಿ–ಬೆಳೆಸುವ ಕಾರ್ಯವಾಗಬೇಕು. ಆ ನಿಟ್ಟಿನಲ್ಲಿ ತರಬೇತಿ ಯಶಸ್ವಿಗೊಳಿಸೋಣ ಎಂದು ಸಲಹೆ ನೀಡಿದರು.

ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರು ಹಾಗೂ ಹಿರಿಯ ಕಲಾವಿದರಾದ ಶಂಕ್ರಣ್ಣ ಸಂಕಣ್ಣವರ ಮಾತನಾಡಿ, ಅಕಾಡೆಮಿಯಿಂದ ಉದಯೋನ್ಮುಖ ಕಲಾವಿದರಿಗೆ ಲಾವಣಿ, ಗೀಗೀ ಪದಗಳ ತರಬೇತಿ ನೀಡುವ ಒಂದು ಒಳ್ಳೆಯ ಅವಕಾಶ ಒದಗಿದ್ದು, ಎಲ್ಲರ ಸಹಕಾರದಿಂದ ಈ ಕಾರ್ಯ ಯಶಸ್ವಿಗೊಳಿಸೋಣ ಎಂದರು.

ಹಿರಿಯ ಸಾಂಸ್ಕೃತಿಕ ಸಂಘಟಕರು ಹಾಗೂ ಕೀರ್ತನಕಾರರಾದ ಚನ್ನವೀರಯ್ಯ ಕಡಣಿ ಶಾಸ್ತ್ರೀಗಳು, ಹಿರಿಯ ಸಾಹಿತಿ ಅಂದಾನೆಪ್ಪ ವಿಭೂತಿ, ಪತ್ರಕರ್ತ ಹಾಗೂ ಹವ್ಯಾಸಿ ರಂಗಕಲಾವಿದ ಮೌನೇಶ ಸಿ.ಬಡಿಗೇರ(ನರೇಗಲ್ಲ), ಗ್ರಾಮೀಣ ವಿ.ವಿಯ ಉಪನ್ಯಾಸಕರಾದ ಚಂದ್ರಪ್ಪ ಬಾರಂಗಿ, ನಟರಂಗದ ಸೋಮು ಚಿಕ್ಕಮಠ, ಜನಪದ ಕಲಾವಿದ ಗವಿಸಿದ್ಧಯ್ಯ ಹಳ್ಳಕೇರಿಮಠ, ಕಲಾವಿದರಾದ ಬಸವರಾಜ ಹಡಗಲಿ ಲಕ್ಕುಂಡಿ, ಅಡವಿಸೋಮಾಪುರದ ವೀರಣ್ಣ ಅಂಗಡಿ, ಮೆಣಸಗಿಯ ನಿಂಗಬಸಪ್ಪ ದಿಂಡೂರ, ಕಿರಟಗೇರಿಯ ಬಸವರಾಜ ಹಾಲನ್ನವರ, ಲಕ್ಕುಂಡಿಯ ಶಿವ ಭಜೆ–ಂತ್ರಿ, ಮಂಜುನಾಥ ಒಂಟೆತ್ತಿನ ಸಭೆಯಲ್ಲಿ ಉಪಸ್ಥಿತರಿದ್ದು, ಸಲಹೆಗಳನ್ನು ನೀಡಿದರು.

ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ತರಬೇತಿ ಹಾಗೂ ವಿಚಾರ ಸಂಕಿರಣದೊಂದಿಗೆ ಜಿಲ್ಲೆಯ ಗ್ರಾಮೀಣ ಸ್ಥಳವೊಂದರಲ್ಲಿ ಗೀಗೀ ಪದ ಕಾರ್ಯಕ್ರಮ ಆಯೋಜಿಸುವ ಮೂಲಕ ಜಾನಪದ ವಾತಾವರಣ ನಿರ್ಮಾಣ ಮಾಡೋಣ ಎಂದು ಸಲಹೇ ನೀಡಿದರು.

### ಅಲೆಮಾರಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಗದಗ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ

# ವಿಶೇಷ ಕಾಳಜಿಯಿಂದ ಕಾರ್ಯಪ್ರವೃತ್ತರಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅವಕಾಶ ವಂಚಿತ ಪ.ಜಾ ಮತ್ತು ಪ.ಪಂ ಅಲೆಮಾರಿ ಸಮುದಾಯದವರಿಗೆ ಶಿಕ್ಷಣ, ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ ಸರ್ವತೋಮುಖ ಅಭಿವೃದ್ಧಿಗೆ ಇಲಾಖಾ ಅಧಿಕಾರಿಗಳು ವಿಶೇಷ ಕಾಳಜಿಯಿಂದ ಕಾರ್ಯ ಪ್ರವೃತ್ತರಾಗಬೇಕು ಎಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಮಾಜ ಕಲ್ಯಾಣ ಇಲಾಖೆ ಹಾಗು ಜಿಲ್ಲಾ ಅನುಷ್ಠಾನ ಸಮಿತಿಯ ಜಂಟಿ ಸಭೆ ಮತ್ತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಮಾತನಾಡಿ, ನಿವೇಶನ ಸಮಸ್ಯೆ ಇರುವವರಿಗೆ ಹತ್ತಿರದಲ್ಲಿರುವ ಸರ್ಕಾರಿ ಜಾಗವನ್ನು ಗುರುತಿಸಿ ನಿವೇಶನ ನೀಡಲಾಗುವುದು. ಈಗಾಗಲೇ ನಿವೇಶನ ಹೊಂದಿರುವವರಿಗೆ ಮನೆ ನಿರ್ಮಾಣಕ್ಕೆ ಅಗತ್ಯ ಕ್ರಮವಹಿಸಲಾಗುವುದು. ಜಾತಿ ಪ್ರಮಾಣಪತ್ರದ ಸಮಸ್ಯೆ ಕುರಿತು ಈಗಾಗಲೇ ಸಭೆಗಳು ಜರುಗಿದ್ದು, ತಾಂತ್ರಿಕ ತೊಂದರೆಗಳನ್ನು ಸರಿಪಡಿಸಿ ಸರಿಯಾದ ಮಾರ್ಗ ಕಂಡುಕೊಳ್ಳಲು ತಹಸೀಲ್ದಾರರಿಗೆ ಸೂಚಿಸಲಾಗುವುದು ಎಂದರು.

ನಂತರ ಮಾತನಾಡಿದ ನಿಗಮದ ಅಧ್ಯಕ್ಷರು, ನರಗುಂದ ಪಟ್ಟಣದ ಹರಿಣಿ ಶಿಕಾರಿ ಸಮುದಾಯದವರಿಗೆ ನಿವೇಶನಗಳ ಸಮಸ್ಯೆಯಿದೆ. ಶಾಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು,



ಶುದ್ಧ ಕುಡಿಯುವ ನೀರನ್ನು ಕಲ್ಪಿಸಲು ಕ್ರಮ ವಹಿಸಲಾಗುವುದು. ಮಹಿಳೆಯರಿಗೆ ಶೌಚಾಲಯದ ಸಮಸ್ಯೆ ಇದ್ದು, ಈ ಕುರಿತು ಸೂಕ್ತ ವ್ಯವಸ್ಥೆ ಕಲ್ಪಿಸಬೇಕಾಗಿದೆ. ಈ ಜನರಿಗೆ ಶುಚಿತ್ವದ ಕುರಿತು ಅರಿವು ಮೂಡಿಸುವ ಕೆಲಸವಾಗಬೇಕು ಎಂದು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಪುರಸಭೆ ವತಿಯಿಂದ ನೀರಿಗೆ ನಳದ ಸೌಲಭ್ಯ ಈಗಾಗಲೇ ಇದ್ದು, ಶುದ್ಧ ನೀರು ಒದಗಿಸಲು ಕ್ರಮವಹಿಸಲಾಗುವದು. ಮಹಿಳೆಯರಿಗೆ ಗೌರವ ಘಟಕ ನಿರ್ಮಿಸಲು ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಮುಂಡರಗಿ ಪಟ್ಟಣದ ಕುಂಚಿ ಕೊರವ ಸಮುದಾಯದವರ 35 ಕುಟುಂಬಗಳು ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿದ್ದು, 28 ಜನರ ಅರ್ಜಿಗಳು ಆಯ್ಕೆಯಾಗಿದೆ. ಶೀಘ್ರದಲ್ಲಿ ಹಕ್ಕುಪತ್ರ ನೀಡಲು ಕ್ರಮ ವಹಿಸಲಾಗುವುದು. ಮನೆ ನಿರ್ಮಾಣ, ಕುಡಿಯುವ ನೀರು ಮತ್ತು ಬೀದಿದೀಪದ ಸಮಸ್ಯೆ, ವಯಸ್ಕರ ಶಿಕ್ಷಣ ಕುರಿತಂತೆ ಕ್ರಮ ವಹಿಸಬೇಕು ಎಂದು ಪಲ್ಲವಿ ಜಿ ಸೂಚಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಮುಂಡರಗಿಯಲ್ಲಿ ಈಗಾಗಲೇ ಜಮೀನು ಲಭ್ಯವಿದ್ದು, ಈ ಹಿಂದೆ ಫಲಾನುಭವಿಗಳ ಪಟ್ಟಿಯೂ ತಯಾರಾಗಿತ್ತು. ಫಲಾನುಭವಿಗಳ ಪಟ್ಟಿ ಸರಿಯಿಲ್ಲ ಎಂದು ವಿರೋಧ ವ್ಯಕ್ತವಾಗಿದ್ದರಿಂದ ಹೊಸ ಪಟ್ಟಿಯ ಪ್ರಕ್ರಿಯೆ ನಡೆಯುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಮೀನುಗಾರಿಗೆ ಮಾಡುವವರಿಗೆ ಈಗಾಗಲೇ ಮೀನುಗಾರಿಕೆ ಇಲಾಖೆಯಿಂದ ವಿಮೆ ಸೌಲಭ್ಯವಿದ್ದು, ಕನಿಷ್ಠ ವಂತಿಕೆಯನ್ನು ಪಾವತಿಸಿ ವಿಮೆಯನ್ನು ಪಡೆಯಬಹುದಾಗಿದೆ ಎಂದು ತಿಳಿಸಿದರು.

ಸರ್ಕಾರದ ಹಾಗೂ ಸಾರ್ವಜನಿಕರ ನಡುವೆ ಕೊಂಡಿಯಂತೆ ವಿವಿಧ ಇಲಾಖೆಯ ಅಧಿಕಾರಿಗಳು ಕೆಲಸ ಮಾಡುತ್ತಿದ್ದು, ಸಮಾಜದ ಅನಿಷ್ಟ ಪದ್ಧತಿಗಳನ್ನು ಹೋಗಲಾಡಿಸಿ ಆ ಸಮುದಾಯವರಿಗೆ ಶಿಕ್ಷಣ ಒದಗಿಸುವ ಕಡೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅಧ್ಯಕ್ಷೆ ಪಲ್ಲವಿ ಜಿ ತಿಳಿಸಿದರು.

ಈ ಸಂದರ್ಭದಲ್ಲಿ ನಿಗಮದ ವಿಶೇಷ ಅಧಿಕಾರಿ ಆನಂದ ಏಕಲವ್ಯ, ನಗರಸಭೆ ನಾಮನಿರ್ದೇಶಿತ ಸದಸ್ಯ ದುರ್ಗೇಶ ವಿಭೂತಿ, ಜಿಲ್ಲಾ ಅಲೆಮಾರಿ ಅನುಷ್ಠಾನ ಸಮಿತಿ ನಾಮನಿರ್ದೇಶಿತ ಸದಸ್ಯರಾದ ಹುಲ್ಲೇಶ ಭಜಂತ್ರಿ, ಹುಸೇನಪ್ಪಾ ಗಡ್ಡದವರ, ಶಿವರಾಜ ಕಡೆಮನಿ, ಲಕ್ಷ್ಮಣ ಶೇಷಗಿರಿ, ಮೇನಕಾ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ಡಿಡಿಎಲ್ಆರ್. ರುದ್ರಗೌಡ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಪದ್ಮಾವತಿ ಜಿ, ಡಿಯುಡಿಸಿ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.




ಹೊಸತಲೆಮಾರಿನ ವಚನಸಾಹಿತ್ಯ ಸಂಶೋಧಕರಿಗೆ ಅಖಿಲಭಾರತ ಶರಣ ಸಾಹಿತ್ಯ ಪರಿಷತ್ತು ಮತ್ತು ರಮಣಶ್ರೀ ಪ್ರತಿಷ್ಠಾನ ಜಂಟಿಯಾಗಿ ಕೊಡಮಾಡುವ 'ರಮಣಶ್ರೀ ಶರಣ ಉತ್ತೇಜನ ಪ್ರಶಸ್ತಿ'ಯನ್ನು ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯವನರು ರೋಣ ತಾಲೂಕಿನ ಡ.ಸ. ಹಡಗಲಿ ಗ್ರಾಮದ ಡಾ. ಅಂದಯ್ಯ ಅರವಟಗಿಮಠ ಅವರಿಗೆ ಪ್ರದಾನ ಮಾಡಿದರು. ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಕೇಂದ್ರ ಸಚಿವ ವಿ.ಸೋಮಣ್ಣ, ಮನು ಬಳಿಗಾರ, ಡಾ. ವೀರಣ್ಣ ರಾಜೂರು, ಎಸ್. ಷಡಕ್ಷರಿ ಮುಂತಾದ ಗಣ್ಯರು ಉಪಸ್ಥಿತರಿದ್ದರು.

# ನಾವೇ ನಮ್ಮ ಭವಿಷ್ಯದ ರೂವಾರಿಗಳು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಮ್. ಅಗಡಿ ವಿಜ್ಞಾನ ಹಾಗೂ ವಾಣಿಜ್ಯ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಸೋಮವಾರ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಕೆಸಿಇಟಿ ಹಾಗೂ ನೀಟ್ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅಗಡಿ ಸನ್ ರೈಸ್ ಆಸ್ಪತ್ರೆಯ ಮುಖ್ಯ ಅಧಿಕಾರಿ ಡಾ.ರಾಜಶೇಖರ ಮೂಲಿಮನಿ, ಸ್ಪರ್ಧಾತ್ಮಕ ಪರೀಕ್ಷೆಯು ನಮ್ಮ ಗುರಿಸಾಧನೆಯ ಮೊದಲ ಮೆಟ್ಟಿಲು. ನಮ್ಮ ಭವಿಷ್ಯದ ರೂವಾರಿಗಳು ನಾವೇ ಆಗಿದ್ದರಿಂದ ವಿದ್ಯಾರ್ಥಿಗಳು




ಶ್ರದ್ಧೆಯಿಂದ ಸತತಾಭ್ಯಾಸ ರೂಡಿಸಿಕೊಂಡರೆ ಯಶಸ್ಸು ಸಾಧ್ಯ ಎಂದರು.

ಅತಿಥಿಗಳಾಗಿ ಅಗಡಿ ಇಂಜಿನಿಯರಿಂಗ್ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ, ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎನ್. ಹಯವದನ, ಹಣಕಾಸು ವಿಭಾಗದ ರವಿಪ್ರಕಾಶ ಹಾಗೂ ಕ್ಯಾಡಕಾನ ಎಜುಕೇಷನ್ ಲಿಮಿಟೆಡ್‌ನ ಮುಖ್ಯಸ್ಥ ಪ್ರೊ. ಸುದರ್ಶನ್, ಉಪನ್ಯಾಸಕ ವೃಂದ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಉಪನ್ಯಾಸಕರಾದ ಸಿ.ಎಸ್. ಹಿರೇಮಠ, ವೇದಾ ವಸ್ತ್ರದ ನಿರೂಪಿಸಿದರು.

## ಸಿ.ಸಿ ರಸ್ತೆ ನಿರ್ಮಾಣಕ್ಕೆ ಭೂಮಿಪೂಜೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಾರ್ಡ್ ನಂ.24 ಹಾಗೂ 25ರ ಹುಯಿಲಗೋಳ ನಾರಾಯಣರಾಯರ ವೃತ್ತದಿಂದ ಚಾವಡಿ ಕೂಟದವರಗೆ ಬರುವ ಸರಾಫ್ ಬಜಾರ ರಸ್ತೆಯ ಸಿ.ಸಿ. ರಸ್ತೆ ನಿರ್ಮಾಣ ಕಾಮಗಾರಿಗೆ ವಾರ್ಡ್ ನಂ-25 ನಗರೋತ್ಥಾನ ಯೋಜನೆಯಲ್ಲಿ 37 ಲಕ್ಷ ಮತ್ತು 15ನೇ ಹಣಕಾಸು ಯೋಜನೆ ಅಡಿಯಲ್ಲಿ 13 ಲಕ್ಷ ರೂಪಾಯಿಗಳು ಮತ್ತು ವಾರ್ಡ್ ನಂ. 24ರ 15ನೇ ಹಣಕಾಸು ಅಡಿಯಲ್ಲಿ 13 ಲಕ್ಷ ರೂ.ಗಳು ಹೀಗೆ ಒಟ್ಟು 63 ಲಕ್ಷ ರೂಪಾಯಿ ವೆಚ್ಚದ ಸಿ.ಸಿ ರಸ್ತೆಯ ಭೂಮಿ ಪೂಜೆ ಕಾಮಗಾರಿಗೆ ನಗರಸಭೆ ಸದಸ್ಯ ವಿನಾಯಕ ಮಾನ್ವಿ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ವಾರ್ಡ್ ನಂ-24ರ ನಗರಸಭೆ ಸದಸ್ಯ ನಾಗರಾಜ ತಳವಾರ, ಅನಿಲ ಅಬ್ಬಿಗೇರಿ, ವೆಂಕಟೇಶ ಎನ್.ಹಬೀಬ, ಈಶ್ವರ ಕೋಟಿ, ಸತೀಶ ಕಾವೇರಿ, ಯಂಕಣ್ಣ ಕಲಾಲ, ಬಸವರಾಜ ಮುರಗೋಡ, ನಂದು ಬೇವಿನಕಟ್ಟಿ, ಸಂತೋಷ, ಕಬಾಡರ, ಶಂಕರ ಮಲ್ಲಸಮುದ್ರ, ಮುನ್ನಾ ರೇಷ್ಮಿ, ಬಾಬು ಬೇಂದ್ರೆ, ಶ್ರೀಕಾಂತ ಆದೇಪ್ಪನವರ, ಪ್ರಸಾದ ಶಿದ್ಲಿಂಗ್, ಲೋಕೇಶ ಖಟವಟೆ, ಪಾರ್ವತಿ ಪಟ್ಟಣಶೆಟ್ಟಿ, ಭಗನ್ ರಾಜಪುರೋಹಿತ, ಥಾಲಾಯತ, ಸೋಮಶೇಖರ ಹೊನ್ನಗುಡಿ, ಗುತ್ತಿಗೆದಾರರಾದ ಲಕ್ಷ್ಮಣ ದೊಡ್ಡಮನಿ, ಶರತ್ ಮುಂತಾದವರು ಇದ್ದರು.

### ನರೇಗಲ್ಲದಲ್ಲಿ 13 ತಾಸುಗಳ ಕಾಲ ಮೊಳಗಿದ ಹನುಮಾನ್ ಚಾಲೀಸಾ ಪಠಣ

# ಹನುಮ ಭಕ್ತಿಯ ಪರಾಕಾಷ್ಠೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಪಟ್ಟಣದಲ್ಲಿ ರವಿವಾರ ಬೆಳಕು ಹರಿಯುತ್ತಿದ್ದಂತೆ ಎಲ್ಲರ ಕಿವಿಗಳಲ್ಲಿ ಹನುಮಾನ್ ಚಾಲೀಸಾ ಮಂತ್ರವೇ ಕೇಳಿಬರುತ್ತಿತ್ತು. ಅದು ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಹೆಬ್ಬಳ್ಳಿಯ ಶ್ರೀ ದತ್ತಾವಧೂತ ಮಹಾರಾಜರು ಹನುಮಾನ ಚಾಲೀಸಾ ಪಠಣೆಗೆ ಚಾಲನೆ ನೀಡಿದ ಅಪೂರ್ವ ಘಳಿಗೆಯಾಗಿತ್ತು.


ಬೆಳಿಗ್ಗೆ 7ಕ್ಕೆ ಸರಿಯಾಗಿ ಪ್ರಾರಂಭವಾದ ಹನುಮಾನ್ ಚಾಲೀಸಾ ಪಠಣ ರಾತ್ರಿ 8ರವರೆಗೂ ಅವ್ಯಾಹತವಾಗಿ 13 ತಾಸುಗಳ ಕಾಲ ಜರುಗಿ ಪಟ್ಟಣದ ಮತ್ತು ಸುತ್ತಲಿನ ಎಲ್ಲ ಗ್ರಾಮಗಳ ಭಕ್ತರಿಗೆ ಅತ್ಯಾನಂದವನ್ನು ನೀಡಿತು. ಹೊತ್ತು ಏರುತ್ತಿದ್ದಂತೆ ಗದಗ, ಕೋಟುಮಚಗಿ, ಜಕ್ಕಲಿ, ಅಬ್ಬಿಗೇರಿ, ಮಾರನಬಸರಿ, ನಿಡಗುಂದಿ, ಗಜೇಂದ್ರಗಡ, ರೋಣ, ನರಗುಂದ, ಮುಂಡರಗಿ, ಲಕ್ಕುಂಡಿ ಅಷ್ಟೇ ಅಲ್ಲದೆ ದೂರದ ಹುಬ್ಬಳ್ಳಿ-ಧಾರವಾಡ, ನೆರೆಯ ಕೊಪ್ಪಳ, ಯಲಬುರ್ಗಿ, ಕುಕನೂರು ಮುಂತಾದಡೆಗಳಿಂದ ಭಕ್ತ ಸಾಗರವೇ ಹರಿದು ಬಂದಿತು.



ಬೆಳಿಗ್ಗೆ 9.30ರ ಹೊತ್ತಿಗೆ ದೇವಸ್ಥಾನದ ಆವರಣವೆಲ್ಲ ತುಂಬಿ ಹೋಗಿ ಹನುಮಾನ್ ಚಾಲೀಸಾ ಪಠಣೆಯ ಘೋಷವು ಮುಗಿಲು ಮುಟ್ಟಿತ್ತು. ಇದನ್ನು ಪಠಣೆ ಮಾಡುವಲ್ಲಿ ಪುರುಷರು ಮತ್ತು ಮಹಿಳೆಯರಂ ನಡುವೆ ಒಂದು ಪೈಪೋಟಿಯೇ ನಡೆದು ಹನುಮಾನ್ ಚಾಲೀಸಾದ ಭಕ್ತಿಯ ಪರಾಕಾಷ್ಠೆಯನ್ನು ತೋರಿಸಿತ್ತು. ರಾತ್ರಿ 7.30ರ ಹೊತ್ತಿಗೆ ಇನ್ನೇನು ಹನುಮಾನ್ ಚಾಲೀಸಾ ಪಠಣೆ ಮುಕ್ತಾಯಕ್ಕೆ ಬಂದಿತು ಎನ್ನುವಷ್ಟರಲ್ಲಿ ಎಲ್ಲರೂ ವೃತ್ತಾಕಾರದಲ್ಲಿ ನಿಂತು ಕುಣಿಯುತ್ತ ಹನುಮಾನ್ ಚಾಲೀಸಾ ಪಠಣೆಯನ್ನು ಮಾಡತೊಡಗಿದರು. ಹನುಮಂತನ ಆಯುಧವಾದ ಗದೆಯನ್ನು ಹಿಡಿದುಕೊಂಡು ನೃತ್ಯ ಮಾಡುತ್ತ ಹೇಳುತ್ತಿದ್ದ ಹನುಮಾನ್ ಚಾಲೀಸಾ ಎಲ್ಲರನ್ನೂ ಮಂತ್ರಮುಗ್ಧಗೊಳಿಸಿತು. ಪುರುಷರು, ಮಹಿಳೆಯರು ಈ ಸಮಯದಲ್ಲಿ ಬಗಾಟಬುಗುರಿ ಆಡಿ ತಮ್ಮ ಸಂತೋಷವನ್ನು ವ್ಯಕ್ತಪಡಿಸಿದರು.

ನಂತರ ನಡೆದ ಸಮಾರೋಪ ಸಮಾರಂಭದಲ್ಲಿ ಪಲ್ಲವಿ ಗ್ರಾಮಪುರೋಹಿತ ಪ್ರಾರ್ಥಿಸಿದರು. ಡಾ. ಕೃಷ್ಣಾ ಜಿ. ಕಾಳೆ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಅರುಣ ಬಿ.ಕುಲಕರ್ಣಿ ನಿರೂಪಿಸಿದರೆ, ರಮೇಶ ಕುಲಕರ್ಣಿ ವಂದಿಸಿದರು.

ಭಕ್ತರ ಈ ಸಡಗರ-ಸಂಭ್ರಮವನ್ನು ಕಂಡ ವ್ಯವಸ್ಥಾಪಕರೆಲ್ಲರೂ ಭಾವುಕರಾಗಿದ್ದರು. ತಾವು ಅದೆಂತಹ ಮಹತ್ಕಾರ್ಯವನ್ನು ನೆರವೇರಿಸಿದೆವು ಎನ್ನುವ ಧನ್ಯತಾ ಭಾವ ಅವರಲ್ಲಿತ್ತು. ಸ್ವಾಗತ ಸಮಿತಿಯ ಗೌರವಾಧ್ಯಕ್ಷ ಡಾ. ಜಿ.ಕೆ. ಕಾಳೆ, ಕಾರ್ಯಾಧ್ಯಕ್ಷ ಶ್ರೀಪಾದಭಟ್ಟ ಜೋಷಿ, ದತ್ತಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ, ಉಪಾಧ್ಯಕ್ಷ ಆದರ್ಶ ಕುಲಕರ್ಣಿ, ಕಾರ್ಯದರ್ಶಿ ರಘುನಾಥ ಕೊಂಡಿ, ಆರ್.ಡಿ. ಕುಲಕರ್ಣಿ, ಗುರುರಾಜ ಕುಲಕರ್ಣಿ, ಆನಂದ ಕುಲಕರ್ಣಿ, ವಿಶ್ವನಾಥ ಗ್ರಾಮಪುರೋಹಿತ, ಅನಸೂಯಾ ಮಹಿಳಾ ಮಂಡಳಿಯ ಸದಸ್ಯರ ಕಣ್ಣಾಲಿಗಳು ತುಂಬಿದ್ದವು.




ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ 68ನೇ ಮಹಾಪರಿನಿರ್ವಾಣ ದಿನ ಆಚರಿಸಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಪ್ರಮುಖರಾದ ನಾಗರಾಜ ಕುಲಕರ್ಣಿ, ಅನಿಲ ಅಬ್ಬಿಗೇರಿ, ಬಿ.ಎಸ್. ಚಿಂಚಲಿ, ರಮೇಶ ಸಜ್ಜಗಾರ, ಕೆ.ಪಿ. ಕೋಟಿಗೌಡ್ರ, ವಾಯ್.ಪಿ. ಅಡ್ನೂರ, ಮುತ್ತಣ್ಣ ಮೂಲಿಮನಿ, ವಿನೋದ ಹಂಸನೂರ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ಅನುಭವ ಮಂಟಪದ ಸಿದ್ಧಾಂತದಂತೆಯೇ ಸರ್ಕಾರ ನಡೆಸುತ್ತಿದ್ದೇವೆ

▶▶ ಮೊದಲನೇ ಪುಟದಿಂದ

ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಅನುಭವ ಮಂಟಪದ ತೈಲಚಿತ್ರ ಅನಾವರಣ ಮಾಡಿರುವುದು ಶ್ಲಾಘನೀಯ.

ಜಾತಿ ತಾರತಮ್ಯ, ಲಿಂಗ ತಾರತಮ್ಯ ತೊಡೆದುಹಾಕುವ ಪ್ರಯತ್ನ 12ನೇ ಶತಮಾನದಲ್ಲಿ ಆಗಿನ ಅನುಭವ ಮಂಟಪದಲ್ಲಿ ಆಗಿತ್ತು. ಇದು ನಡೆದು 10 ಶತಮಾನಗಳೇ ಕಳೆದಿವೆ, ಆದರೆ ಕಾಲ ಕಳೆದಿದೆಯೇ ಹೊರತು, ಜಾತಿ ವ್ಯವಸ್ಥೆ ಹಾಗೂ ಜಾತಿಗಳ ಸಂಖ್ಯೆ ಇನ್ನಷ್ಟು ಹೆಚ್ಚಾಗುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಮಾತನಾಡಿ, ಧರ್ಮಾಂಧತೆ, ಜಾತೀಯತೆ ನಮ್ಮೆಲ್ಲರ ಅಭಿವೃದ್ಧಿಗೆ ಮಾರಕವಾಗಿದೆ. 12ನೇ ಶತಮಾನದಲ್ಲಿ ಧರ್ಮವನ್ನು ಜನರ ಮನೆ ಬಾಗಿಲಿಗೆ ತೆಗೆದುಕೊಂಡು ಹೋಗುತ್ತಿದ್ದರು. ತಮ್ಮ ವಚನ ಸಾಹಿತ್ಯ ಚಳುವಳಿ ಮೂಲಕ ನಾವೆಲ್ಲ ಒಂದೇ ಎಂದು ಸಾರಿ ಪ್ರಪಂಚಕ್ಕೆ ಮಾದರಿಯಾದರು. ಬಸವಣ್ಣನವರ ಆಲೋಚನೆಗಳನ್ನು ಕೇವಲ ಭಾಷಣದ ವಸ್ತುವನ್ನಾಗಿಸದೆ, ಪ್ರಜಾಪ್ರಭುತ್ವನ್ನು ಬಲಪಡಿಸಲು ಯತ್ನಿಸೋಣ ಎಂದರು.ಅನುಭವ ಮಂಟಪದ ತೈಲಚಿತ್ರ ಅನಾವರಣ ಕುರಿತಂತೆ ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್, ಸದನದ ಸದಸ್ಯರುಗಳಾದ ಅರವಿಂದ ಬೆಲ್ಲದ್, ಬಸವರಾಜ ರಾಯರಡ್ಡಿ, ಶಶಿಕಲಾ ಜೊಲ್ಲೆ ಸೇರಿದಂತೆ ಹಲವು ಸದಸ್ಯರು ಚರ್ಚೆಯಲ್ಲಿ ಪಾಲ್ಗೊಂಡು, ಅನುಭವ ಮಂಟಪದ ತೈಲವರ್ಣ ಚಿತ್ರ ಅನಾವರಣಗೊಳಿಸಿದ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

### ಡಿ.30 ರವರೆಗೆ ತೆರಿಗೆ ವಸೂಲಾತಿ ವಿಶೇಷ ಅಭಿಯಾನ । ತಾ.ಪಂ ಇಓ ಚಂದ್ರಶೇಖರ ಕಂದಕೂರ

# ತೆರಿಗೆ ವಸೂಲಿಗೆ ನೋಡಲ್ ಅಧಿಕಾರಿಗಳ ನೇಮಕ

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಡಿಸೆಂಬರ್ 1ರಿಂದ 30ರವರೆಗೆ 'ತೆರಿಗೆ ವಸೂಲಾತಿ ವಿಶೇಷ ಅಭಿಯಾನ' ಹಮ್ಮಿಕೊಳ್ಳಲಾಗಿದೆ. ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ತೆರಿಗೆ ವಸೂಲಾತಿ ಮಾಡುವ ನಿಟ್ಟಿನಲ್ಲಿ ಪ್ರತಿ ಗ್ರಾ.ಪಂಗೆ ನೋಡಲ್ ಅಧಿಕಾರಿಗಳನ್ನು ನೇಮಿಸಿ ಆದೇಶ ಹೊರಡಿಸಲಾಗಿದೆ ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಹೇಳಿದರು.

ತಾಲೂಕಿನ ಡ.ಸ. ಹಡಗಲಿ ಗ್ರಾಮ ಪಂಚಾಯಿತಿಗೆ ಕರ ವಸೂಲಾತಿ ಅಭಿಯಾನ ಮತ್ತು ಮನರೇಗಾ ಕಾಮಗಾರಿ ಪರಿಶೀಲನೆಗೆ ಆಗಮಿಸಿದ ಸಂದರ್ಭದಲ್ಲಿ ಪಂಚಾಯತ ಸಿಬ್ಬಂದಿಗಳೊಂದಿಗೆತೆರಿಗೆ ವಸೂಲಾತಿ ಕುರಿತು ಚರ್ಚಿಸಿ ಅವರು ಮಾತನಾಡಿದರು.

11/12/2024ರಂದು ಕರ ವಸೂಲಾತಿ ವಿಶೇಷ ಅಭಿಯಾನವನ್ನು ಜಿಲ್ಲೆಯಾದ್ಯಂತ ಹಮ್ಮಿಕೊಂಡಿದ್ದು, ಆ ದಿನ ಗ್ರಾ.ಪಂ ಕರ



ವಸೂಲಿಗಾರರು ಮುಂಜಾನೆ 7 ಗಂಟೆಗೆ ಗ್ರಾ.ಪಂ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಅಭಿವೃದ್ಧಿ ಅಧಿಕಾರಿಗಳ ಜೊತೆಗೂಡಿ ಮನೆ ಮನೆಗೆ ಭೇಟಿ ನೀಡಿ ಹೆಚ್ಚಿನ ಮಟ್ಟದಲ್ಲಿ ತೆರಿಗೆ ವಸೂಲಿ ಮಾಡಬೇಕು. ಎಲ್ಲರೂ ತಾಲೂಕಿನ ಪ್ರಗತಿಗೆ ಹಾಗೂ ಗ್ರಾಮದ ಪ್ರಗತಿಗೆ ಹೆಚ್ಚಿನ ಒತ್ತು ಕೊಡಿ ಎಂದರು.

ತಾಲೂಕಿನ ಎಲ್ಲಾ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ಕರ ವಸೂಲಾತಿ ಅಭಿಯಾನವನ್ನು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು, ನೀರಗಂಟಿಗಳು ಗ್ರಾಮ ಪಂಚಾಯತ ಸಿಬ್ಬಂದಿಗಳು ಜೊತೆ-ಗೆ ಸೇರಿಕೊಂಡು ಮನೆಗಳು, ಅಂಗಡಿ ಮುಂಗಟ್ಟು, ಮಳಿಗೆಗಳಿಗೆ ತೆರಳಿ ಕರ ವಸೂಲಾತಿ ಕೈಗೊಂಡು ಅಭಿಯಾನ ಯಶಸ್ವಿಗೊಳಿಸಲು ಸಹಕಾರ ನೀಡಿದರೆ ನಿಗದಿತ ಗುರಿಯನ್ನು ಸಾಧಿಸಬಹುದು ಎಂದರು.

ಗ್ರಾಮ ಪಂಚಾಯಿತಿಗೆ ಸಲ್ಲಿಕೆ ಆಗಬೇಕಾಗಿರುವ ತೆರಿಗೆಯಲ್ಲಿ ಶೇ.100ರಷ್ಟು ವಸೂಲಿ ಮಾಡುವುದು ಗ್ರಾಮ ಪಂಚಾಯಿತಿಯ ಪ್ರಾಥಮಿಕ ಹೊಣೆಗಾರಿಕೆಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಪರಿಣಾಮಕಾರಿಯಾಗಿ ಕ್ರೋಢೀಕರಿಸಿಕೊಳ್ಳಿ. ಅಂದಾಗ ಗ್ರಾಮದ ಅಭಿವೃದ್ಧಿ ಸಾಧ್ಯ ಎಂದು ಚಂದ್ರಶೇಖರ ಬಿ.ಕಂದಕೂರ ಹೇಳಿದರು.

ಈ ಸಂದರ್ಭದಲ್ಲಿ ಡ.ಸ ಹಡಗಲಿ ಗ್ರಾ.ಪಂ ಅಧ್ಯಕ್ಷ ಗಂಗಾಧರ ಕಮ್ಮಾರ, ಗ್ರಾ.ಪಂ ಸದಸ್ಯರು, ಅಭಿವೃದ್ಧಿ ಅಧಿಕಾರಿ ಈಶ್ವರಗೌಡ ಪಾಟೀಲ, ತಾ.ಪಂ ತಾಂತ್ರಿಕ ಸಂಯೋಜಕ ಪ್ರವೀಣ ಸೂಡಿ ಸೇರಿದಂತೆ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಹಾಜರಿದ್ದರು.

## ಆಶಾ ಕಾರ್ಯಕರ್ತೆಯರ ಪ್ರತಿಭಟನೆ




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಚನ್ನಮ್ಮ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಮೆರವಣಿಗೆ ಮೂಲಕ ಸಾಗಿ ಪ್ರತಿಭಟನೆ ನಡೆಸಿದ ಆಶಾ ಕಾರ್ಯಕರ್ತೆಯರು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮತ್ತು ಜಿಲ್ಲಾ ಸಮಸ್ಯೆಗಳ ಪರಿಹಾರಕ್ಕೆ ಆಶಾ ಕುಂದುಕೊರತೆ ಸಭೆ ಕರೆಯುವಂತೆ ಒತ್ತಾಯಿಸಿದರು.

ಗದಗ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಖಅಊಔ ಅವರಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಜಿಲ್ಲಾ ಗೌರವಾಧ್ಯಕ್ಷರಾದ ಸುರೇಶ್.ಉ, ಜಿಲ್ಲಾ ಅಧ್ಯಕ್ಷರಾದ ಭಾಗ್ಯಜ್ಯೋತಿ ಹಡಪದ, ಜಿಲ್ಲಾ ಕಾರ್ಯದರ್ಶಿ ಲಕ್ಷ್ಮೀ ಪೂಜಾರ್, ಜಿಲ್ಲಾ ಉಪಾಧ್ಯಕ್ಷರಾದ ಸುಂದರಮ್ಮ ಪಾಟೀಲ್, ಪ್ರೇಮ ಪಾಟೀಲ್, ಶೋಭಾ ಮಲ್ಲನಗೌಡ, ಪ್ರಭಾವತಿ, ಅನ್ನಪೂರ್ಣ ಕಟವಾ, ಜಿಲ್ಲಾ ಸಮಿತಿ ಸದಸ್ಯರು ಹಾಗೂ ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

**ಪತ್ರಿಕಾಗೋಷ್ಠಿಯಲ್ಲಿ ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ**

# ಅಲೆಮಾರಿಗಳು ಮುಖ್ಯವಾಹಿನಿಗೆ ಬರುವಂತಾಗಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ನಿರ್ಲಕ್ಷಿತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಸಮುದಾಯದವರ ಏಳಿಗಾಗಿ ನಿಗಮ ಸ್ಥಾಪನೆಯಾಗಿದ್ದು, ಪ.ಜಾ ಮತ್ತು ಪ.ಪಂ ಅಲೆಮಾರಿ ಸಮುದಾಯದವರು ಸಮಾಜದ ಮುಖ್ಯವಾಹಿನಿಗೆ ಬರುವಂತಾಗಬೇಕೆಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಪತ್ರಿಕಾಗೋಷ್ಠಿಯನ್ನುದ್ದೇಶಿ ಅವರು ಮಾತನಾಡಿದರು. ಪ.ಜಾ ಮತ್ತು ಪ.ಪಂ. ಅಲೆಮಾರಿ ಅಭಿವೃದ್ಧಿ ನಿಗಮವು ಗದಗ ಜಿಲ್ಲೆಯಲ್ಲಿ ಡಿಸೆಂಬರ್ 7ರಿಂದ 9ರವರೆಗೆ ಪ್ರವಾಸ ಕೈಗೊಂಡಿದ್ದು, ಜಿಲ್ಲೆಯ ಅಲೆಮಾರಿ ಸಮುದಾಯದವರನ್ನು ಭೇಟಿ ಮಾಡಿ ಅವರ ಸಮಸ್ಯೆಗಳನ್ನು ಹಾಗೂ ಕುಂದುಕೊರತೆಗಳ ಅಹವಾಲುಗಳನ್ನು ಸ್ವೀಕರಿಸಲಾಗಿದೆ. ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದ್ದರೂ ಅಲೆಮಾರಿ ಸಮುದಾಯದವರಿಗೆ ಸ್ವಾತಂತ್ರ್ಯ ಬಂದಿರಲಿಲ್ಲ. 1952ರಲ್ಲಿ ಆಗಿನ ಪ್ರಧಾನಿ ಜವಾಹರ ಲಾಲ್ ನೆಹರು ಅವರು ಅಲೆಮಾರಿ ಸಮುದಾಯದವರನ್ನು ಸ್ವತಂತ್ರಗೊಳಿಸಿದರು ಎಂದರು.

ಲಕ್ಷ್ಮೇಶ್ವರ ತಾಲೂಕಿನ ಬಾಲೆಹೊಸೂರಿನಲ್ಲಿ ಗ್ರಾಮದ ಗಂಟಿಚೋರ್ ಜನಾಂಗದವರಿಗೆ ಸ್ಮಶಾನ ಭೂಮಿ ಅಭಿವೃದ್ಧಿ, ನಿವೇಶನ ಸಮಸ್ಯೆ, ಜಾತಿ ಪ್ರಮಾಣಪತ್ರ, ನೂಲಿ ಚಂದಯ್ಯನವರ ಭವನ ಮಂಜೂರಾತಿ, ವಯಸ್ಕರ ಶಿಕ್ಷಣ ಕುರಿತು ಸಮಸ್ಯೆಗಳು ಕಂಡು ಬಂದಿದ್ದು, ಈ ಕುರಿತು ಕ್ರಮವಹಿಸಲಾಗುವುದು ಎಂದರು.

ಲಕ್ಷ್ಮೇಶ್ವರ ಪಟ್ಟಣದ ಇಂದಿರಾ ನಗರದಲ್ಲಿ ಪ.ಜಾತಿಯ ಬುಡ್ಗ ಜಂಗಮ್ ಸಮುದಾಯದ ಕುಟುಂಬಗಳಿಗೆ ನಿವೇಶನ ಲಭ್ಯವಿದ್ದು, ಮನೆ ಕಟ್ಟಿಸುವುದು, ಚೆನ್ನದಾಸರ ಸಮುದಾಯದ ಕುಟುಂಬಗಳಿಗೆ ನಿವೇಶನ, ಸುಡುಗಾಡ ಸಿದ್ಧರ ಸಮುದಾಯದವರಿಗೆ ನಿವೇಶನ ಒದಗಿಸುವ ಕುರಿತು ಸ್ಥಳೀಯ ಶಾಸಕರ ಗಮನಕ್ಕೆ ತರಲಾಗಿದೆ.



ನರಗುಂದ ಪಟ್ಟಣದ ಹರಿಣಿ ಶಿಕಾರಿ ಸಮುದಾಯದವರಿಗೆ ನಿವೇಶನಗಳ ಸಮಸ್ಯೆಯಿದೆ. ಶಾಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು ಶುದ್ಧ ಕುಡಿಯುವ ನೀರನ್ನು ಕಲ್ಪಿಸಲು ಕ್ರಮ ವಹಿಸಲಾಗುವುದು. ಮಹಿಳೆಯರಿಗೆ ಶೌಚಾಲಯದ ಸಮಸ್ಯೆ ಇದ್ದು, ಈ ಕುರಿತು ಸೂಕ್ತ ವ್ಯವಸ್ಥೆ ಕಲ್ಪಿಸಬೇಕಾಗಿದೆ. ಈ ಜನರಿಗೆ ಶುಚಿತ್ವದ ಕುರಿತು ಅರಿವು ಮೂಡಿಸುವ ಕೆಲಸವಾಗಬೇಕು ಎಂದು ನುಡಿದರು. ನರೇಗಲ್ ಪಟ್ಟಣದ ಸಿಂಧೋಳು ಸಮುದಾಯದವರ 55 ಕುಟುಂಬಗಳು ಇದ್ದು, ಅದರಲ್ಲಿ 11 ಮನೆಗಳು ನಿರ್ಮಾಣವಾಗಿದೆ. ಉಳಿದವರಿಗೆ ಬೇರೆ ಕಡೆ ನಿವೇಶನದ ವ್ಯವಸ್ಥೆ ಮಾಡಬೇಕು. ಮೇವುಂಡಿ ಗ್ರಾಮದ ಬುಡ್ಗ ಜಂಗಮ ಸಮುದಾಯದ ಒಟ್ಟು 13 ಕುಟುಂಬಗಳಿದ್ದು 4 ಕುಟುಂಬಗಳಿಗೆ ಮನೆಗಳಿದ್ದು, 9 ಕುಟುಂಬಗಳಿಗೆ ಮನೆಗಳಿರುವುದಿಲ್ಲ. ಅವರ ವಸತಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಬೇಕಾಗಿದೆ. ಜಾತಿ ಪ್ರಮಾಣಪತ್ರದ ಸಮಸ್ಯೆ ಬಗೆಹರಿಸಬೇಕಾಗಿದೆ ಎಂದರು. ಮುಂಡರಗಿ ಪಟ್ಟಣದ ಕುಂಚಿ ಕೊರವ ಸಮುದಾಯದವರ 35 ಕುಟುಂಬಗಳು ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿದ್ದು, 28 ಜನರ ಅರ್ಜಿಗಳು ಆಯ್ಕೆಯಾಗಿದೆ. ಶೀಘ್ರದಲ್ಲಿ ಹಕ್ಕುಪತ್ರ ನೀಡಲು ಕ್ರಮ ವಹಿಸಲಾಗುವುದು. ಮನೆ ನಿರ್ಮಾಣ, ಕುಡಿಯುವ ನೀರು ಮತ್ತು ಬೀದಿದೀಪದ ಸಮಸ್ಯೆ, ವಯಸ್ಕರ ಶಿಕ್ಷಣ ಕುರಿತಂತೆ ಕ್ರಮ ವಹಿಸಲಾಗುವುದು ಎಂದರು.

ಮುಂಡರಗಿ ತಾಲೂಕು ಕೊರ್ಲಹಳ್ಳಿ ಗ್ರಾಮದ ಶಿಳ್ಳೇಕ್ಯಾತ ಸಮುದಾಯದವರು ಮೀನುಗಾರಿಕೆ ಕೆಲಸ ನಿರ್ವಹಿಸುತ್ತಿದ್ದು, ಸರ್ಕಾರದಿಂದ ಅವರಿಗೆ ವಿಮೆ ಸೌಲಭ್ಯ ದೊರೆಯಬೇಕಾಗಿದೆ. ಈ ಕುರಿತು ಸಂಬಂಧಿತ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗುವುದು. ಗದಗ ನಗರದ ಸುಡುಗಾಡು ಸಿದ್ಧರ ಸಮುದಾಯದವರಿಗೆ

> ಅಲೆಮಾರಿ ಸಮುದಾಯದವರಿಗೆ ನೆಲೆ ಸೇರಿದಂತೆ ಶಿಕ್ಷಣ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮ ವಹಿಸಬೇಕು. ಸರ್ಕಾರದ ಹಾಗೂ ಸಾರ್ವಜನಿಕರ ನಡುವೆ ಕೊಂಡಿಯಂತೆ ವಿವಿಧ ಇಲಾಖೆಯ ಅಧಿಕಾರಿಗಳು ಕೆಲಸ ಮಾಡುತ್ತಿದ್ದು, ಸಮಾಜದ ಅನಿಷ್ಟ ಪದ್ಧತಿಗಳಾದ ಬಾಲ್ಯವಿವಾಹ, ಮೌಢ್ಯತನ ಹೋಗಲಾಡಿಸಿ ಆ ಸಮುದಾಯವರಿಗೆ ಶಿಕ್ಷಣ ಒದಗಿಸುವ ಕಡೆಗೆ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ ಎಂದು ಪಲ್ಲವಿ ಜಿ ತಿಳಿಸಿದರು

ಅವರ ಕಾಲೋನಿಯಲ್ಲಿ ಕುಡಿಯುವ ನೀರಿನ ಸಮಸ್ಯೆ, ಶೌಚಾಲಯ ಸಮಸ್ಯೆಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಗದಗ-ಬೆಟಗೇರಿಯ ಹರಿಣಿ ಶಿಕಾರಿ, ಗಂಟಿ ಚೋರ್, ಕೊರಚ, ಕೊರಮ, ಚೆನ್ನದಾಸರ ಸಮುದಾಯಗಳಿಗೆ ಭೂ ಒಡೆತನ ಯೋಜನೆ, ಮೈಕ್ರೋ ಕ್ರೆಡಿಟ್, ನೇರ ಸಾಲ ಮತ್ತು ಉದ್ಯಮಶೀಲತಾ ಯೋಜನೆಗಳಡಿ ಸೌಲಭ್ಯ ದೊರಕಿಸಬೇಕು. ಛಪ್ಪರಬಂದ ಸಮುದಾಯದವರಿಗೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಲೆಮಾರಿ ಸ್ಥಾನ ಕಲ್ಪಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ನಿಗಮದ ಅಧ್ಯಕ್ಷೆ ಪಲ್ಲವಿ ಜಿ ತಿಳಿಸಿದರು.

ಈ ಸಂದರ್ಭದಲ್ಲಿ ನಿಗಮದ ವಿಶೇಷ ಅಧಿಕಾರಿ ಆನಂದ ಏಕಲವ್ಯ, ನಗರಸಭೆ ನಾಮನಿರ್ದೇಶಿತ ಸದಸ್ಯ ದುರ್ಗೇಶ ವಿಭೂತಿ, ಜಿಲ್ಲಾ ಅಲೆಮಾರಿ ಅನುಷ್ಠಾನ ಸಮಿತಿ ನಾಮನಿರ್ದೇಶಿತ ಸದಸ್ಯರಾದ ಹುಲ್ಲೇಶ ಭಜಂತ್ರಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಹಾಜರಿದ್ದರು.

## ಸಾಮೂಹಿಕ ವಿವಾಹ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ ಜಿಲ್ಲೆ ಸವಣೂರು ತಾಲೂಕಿನ ಹೂವಿನ ಶಿಗ್ಲಿ 46ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಲಿಂಗೈಕ್ಯ ಶ್ರೀ ನಿರಂಜನ ಮಹಾಸ್ವಾಮಿಗಳ ಪುಣ್ಯಸ್ಮರಣೋತ್ಸವದ ನಿಮಿತ್ತ ಸಾಮೂಹಿಕ ವಿವಾಹ, ಶಿವದೀಕ್ಷೆ, ಆಯಾಚಾರಗಳನ್ನು ಹಮ್ಮಿಕೊಳ್ಳಲಾಗಿದೆ.

ಸಾಮೂಹಿಕ ವಿವಾಹ ಮತ್ತು ಶಿವದೀಕ್ಷೆ ಆಯಾಚಾರಗಳಿಗೆ 2025ರ ಜನವರಿ 10ರ ಒಳಗಾಗಿ ಹೆಸರು ನೋಂದಾಯಿಸಬಹುದು. ಸದ್ಭಕ್ತರು ಇದರ ಸದುಪಯೋಗ ಪಡೆದುಕೊಳ್ಳಲು ವಿನಂತಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಹದೇವಪ್ಪ ಬಿಷ್ಟನ್ನವರ್-9743569506, ರೇಣುಗೌಡ್ರ ಪಾಟೀಲ್-9742983190, ಶಿವಲಿಂಗಯ್ಯ ಹಿರೇಮಠ-74067 42629 ಸಂಪರ್ಕಿಸಲು ಶ್ರೀಮಠದ ಸಂಘಟಕರು ವಿನಂತಿಸಿದ್ದಾರೆ.

## ಯೋಗ ಸರ್ಟಿಫಿಕೇಟ್ ಪರೀಕ್ಷೆಯಲ್ಲಿ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ


ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರು ಅಗಸ್ಟ್-2024ರಲ್ಲಿ ನಡೆಸಿದ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಜ್ (2023-24) ಕೋರ್ಸ್ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು, ಪರೀಕ್ಷೆಯಲ್ಲಿ ಎಸ್.ವಾಯ್.ಬಿ.ಎಂ.ಎಸ್. ಯೋಗ ಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯದ ಒಟ್ಟು 50 ವಿದ್ಯಾರ್ಥಿಗಳಲ್ಲಿ 47 ವಿದ್ಯಾರ್ಥಿಗಳು






ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಇವರಲ್ಲಿ ಸಂಜನಾ ಸಜ್ಜನರ (92.40%), ಗಿರೀಶ ಜಾಲಿಹಾಳ (89%), ಅರ್ಶಿಯಾನಾಜ್ ಬ್ಯಾಡಗಿ (88%), ಪ್ರಿಯಾ (88%) ಇವರುಗಳು ಹೆಚ್ಚಿನ ಅಂಕಗಳನ್ನು ಗಳಿಸಿ ಪರೀಕ್ಷಾ ಕೇಂದ್ರಕ್ಕೆ ಕ್ರಮವಾಗಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದಿದ್ದಾರೆ. ಸಾಧಕ ವಿದ್ಯಾರ್ಥಿಗಳಿಗೆ ಮತ್ತು ಸಹಕರಿಸಿದ ಸಿಬ್ಬಂದಿ ವೃಂದದವರೆಲ್ಲರಿಗೂ ಬಸವ ಯೋಗ ಮಹಾವಿದ್ಯಾಲಯದ ಮಹಾಪೋಷಕರಾಗಿರುವ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಚೇರಮನ್ ಪ್ರೊ. ಎಸ್.ವಿ. ಸಂಕನೂರ, ಆಡಳಿತಾಧಿಕಾರಿ ಪ್ರೊ. ಎಸ್. ಎಸ್. ಪಟ್ಟಣಶೆಟ್ಟಿ, ಮ್ಯಾನೇಜರ್ ಎಂ.ಎಸ್. ಅಂಗಡಿ, ಪ್ರಾಚಾರ್ಯ ಕೆ.ಎಸ್. ಪಲ್ಲೇದ, ಅಲ್ಯುಮಿನಿ ಅಸೋಶಿಯೇಷನ್ ಅಧ್ಯಕ್ಷ ಡಾ. ಆಯ್.ಬಿ. ಕೊಟ್ಟೂರಶೆಟ್ಟಿ, ಬಸವ ಯೋಗ ಚಿಂತನ ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ, ಸದಸ್ಯ ಡಾ. ಎಂ.ವಿ. ಐಹೊಳ್ಳಿ ಅಭಿನಂದನೆ ತಿಳಿಸಿದ್ದಾರೆ.

## ದೀಪ ಜ್ಞಾನದ ಸಂಕೇತ: ದತ್ತಾವಧೂತರು



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ದೀಪವು ಜ್ಞಾನದ ಸಂಕೇತ. ದೀಪದಿಂದ ಹೊರಡುವ ಬೆಳಕು ನಮ್ಮ ಮನದಲ್ಲಿನ ಕತ್ತಲೆಯನ್ನು ಕಳೆದು ಶಾಂತಿಯನ್ನು ಕೊಡುತ್ತದೆ. ಆದ್ದರಿಂದ ದೀಪೋತ್ಸವದ ಕಲ್ಪನೆಯನ್ನು ನಮ್ಮ ಹಿರಿಯರು ನೀಡಿದ್ದಾರೆ ಎಂದು ಹೆಬ್ಬಳ್ಳಿ ಚೈತನ್ಯಾಶ್ರಮದ ಶ್ರೀ ದತ್ತಾವಧೂತ ಮಹಾರಾಜರು ಹೇಳಿದರು. ಪಟ್ಟಣದ ಶ್ರೀ ನಾರಾಯಣ ದೇವಸ್ಥಾನದಲ್ಲಿ ಚಂಪಾಷಷ್ಠಿಯ ದಿನದಂದು ದೀಪೋತ್ಸವಕ್ಕೆ ಚಾಲನೆ ನೀಡಿ ಅವರು ಆಶೀರ್ವಚನ ನೀಡಿದರು. ನಮ್ಮ ಹಿರಿಯರು ಹಬ್ಬ-ಹರಿದಿನಗಳನ್ನು ಮಾಡಿರುವುದೇ ವೈಜ್ಞಾನಿಕ ತಳಹದಿಯ ಮೇಲೆ. ಪ್ರತಿ ಹಬ್ಬಕ್ಕೂ ತನ್ನದೇ ಆದ ವಿಶಿಷ್ಠ ಅರ್ಥವಿದೆ. ಅದನ್ನು ತಿಳಿದುಕೊಂಡು ಹಬ್ಬಗಳನ್ನಾಚರಿಸಿದರೆ ನಮಗೆ ಸಿಗುವ ಆನಂದ ಅವರ್ಣನೀಯ. ರಾಷ್ಟ್ರಕೂಟರ ಕಾಲದ ಈ ದೇವಸ್ಥಾನವನ್ನು ಕಂಡು ಬಹಳಷ್ಟು ಆನಂದವಾಗಿದೆ. ಆದರೆ ಇದು ಜನರ ಮತ್ತು ಸರಕಾರದ ಅವಕೃಪೆಗೆ ಒಳಗಾಗಿರುವುದನ್ನು ಕಂಡು ಮನಸ್ಸಿಗೆ ನೋವಾಗಿದೆ. ಆದರೂ ಇಷ್ಟಾದರೂ ಉಳಿದುಕೊಂಡು ಬಂದಿರುವದು, ಅದರಲ್ಲಿ ಕಳೆದ ಇಪ್ಪತ್ತೈದು ವರ್ಷಗಳಿಂದ ದೀಪೋತ್ಸವವನ್ನು ನಡೆಸಿಕೊಂಡು ಬಂದಿರುವ ಕೃಷ್ಣ ಗ್ರಾಮಪುರೋಹಿತ ಅವರ ಮನೆತನದವರನ್ನು ಅಭಿನಂದಿಸುವದಾಗಿ ಶ್ರೀಗಳು ಹೇಳಿದರು. ಸರಕಾರ ಈ ದೇವಸ್ಥಾನದ ಕಡೆಗೆ ಗಮನ ನೀಡಬೇಕು. ರಾಷ್ಟ್ರಕೂಟ ಶೈಲಿಯ ಇಷ್ಟು ದೊಡ್ಡ ದೇವಸ್ಥಾನ ಬಹುಶಃ ಎಲ್ಲಿಯೂ ಇಲ್ಲ. ಇದನ್ನು ಸಂರಕ್ಷಣೆ ಮಾಡುವದರ ಜೊತೆಗೆ ಇಲ್ಲಿ ಅನೇಕ ಉತ್ಸವಗಳು, ಹಬ್ಬದ ಆಚರಣೆಗಳು ನಡೆಯುವಂತೆ ನೋಡಿಕೊಳ್ಳಬೇಕು. ಇಲ್ಲಿ ನಡೆಯುತ್ತಿರುವ ಬೆಳ್ಳಿ ಹಬ್ಬದ ದೀಪೋತ್ಸವದಲ್ಲಿ ನಾವು ಪಾಲ್ಗೊಳ್ಳುವ ಅವಕಾಶ ನೀಡಿದ ಶ್ರೀಮನ್ನಾರಾಯಣನಿಗೆ ನಮ್ಮ ಭಕ್ತಿಪೂರ್ವಕ ನಮನಗಳು ಎಂದರು. ಅರ್ಚಕ ಕೃಷ್ಣಾ ಗ್ರಾಮಪುರೋಹಿತ ಪರಿವಾರದವರು, ಹೆಬ್ಬಳ್ಳಿ ಚೈತನ್ಯಾಶ್ರಮದವರು, ಅನಸೂಯಾ ಮಹಿಳಾ ಮಂಡಳದ ಸದಸ್ಯರು ಉಪಸ್ಥಿತರಿದ್ದರು. ನಿವೃತ್ತ ಉಪನ್ಯಾಸಕ ಎಸ್. ಎಚ್. ಕುಲಕರ್ಣಿ ಸ್ವಾಗತಿಸಿದರು. ಮಂಜುನಾಥ ಗ್ರಾಮಪುರೋಹಿತ ನಿರೂಪಿಸಿದರು. ಆದರ್ಶ ಕುಲಕರ್ಣಿ ವಂದಿಸಿದರು.

**ಪತ್ರಿಕಾಗೋಷ್ಠಿಯಲ್ಲಿ ಎಸ್ಎಸ್‌ಕೆ ಹೋರಾಟ ಸಮಿತಿ ಅಧ್ಯಕ್ಷ ಪಾಂಡುರಂಗಸಾ**

# ಎಸ್ಎಸ್‌ಕೆ ಸಮಾಜದ 'ಬೆಳಗಾವಿ ಚಲೋ' ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದಿಂದ ಎಸ್ಎಸ್‌ಕೆ ಸಮಾಜವು ಇದುವರೆಗೂ ಯಾವುದೇ ಸೌಲಭ್ಯ ಪಡೆದಿಲ್ಲ. ರಾಜ್ಯಾದ್ಯಂತ ಸಮಾಜದ ಸುಮಾರು ಶೇ. 80ರಷ್ಟು ಜನ ಆರ್ಥಿಕವಾಗಿ ಹಿಂದುಳಿದಿದ್ದಾರೆ. ದೇವರಾಜ ಅರಸು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಪರಿಶಿಷ್ಠ ಪಂಗಡಕ್ಕೆ ಸೇರಿಸಲು ಬಯಸಿದ್ದರು. ಆದರೆ, ಅಂದು ನಮ್ಮ ಸಮುದಾಯದ ಹಿರಿಯರು ಮಾಡಿದ ತಪ್ಪಿನಿಂದಾಗಿ ನಾವು ಇದುವರೆಗೂ ಶಿಕ್ಷೆ ಅನುಭವಿಸುತ್ತಿದ್ದು, ಎಸ್.ಟಿ ಪಟ್ಟಿಗೆ ಸೇರಿಸಬೇಕೆಂದು ಆಗ್ರಹಿಸಿ ಡಿಸೆಂಬರ್ 11ರಂದು ಬೆಳಗಾವಿ ಚಲೋ ಹಮ್ಮಿಕೊಂಡಿದ್ದೇವೆ ಎಂದು ಎಸ್ಎಸ್‌ಕೆ ಹೋರಾಟ ಸಮಿತಿ ಅಧ್ಯಕ್ಷ ಪಾಂಡುರಂಗಸಾ ಹೇಳಿದರು.

ಸೋಮವಾರ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು,




ಎಸ್ಎಸ್‌ಕೆ ಸಮಾಜವನ್ನು ಕೆಲವರು ದುರ್ಬಳಕೆ ಮಾಡಿಕೊಳ್ಳುತ್ತಿದ್ದು, ಚುನಾವಣೆ ಸಮಯದಲ್ಲಿ ನಾನಾ ಆಮಿಷ ತೋರಿಸಿ ಲಾಭ ಪಡೆಯುತ್ತಾರೆ. ಆದರೆ, ಚುನಾವಣೆ ಮುಗಿದ ನಂತರ ನಮ್ಮನ್ನು ಮರೆಯುತ್ತಾರೆ. ವಿಧಾನಸಭೆ, ವಿಧಾನ ಪರಿಷತ್‌ನಲ್ಲಿ ನಮ್ಮ ಸಮುದಾಯದ ಯಾವುದೇ ನಾಯಕರಿಲ್ಲ. ನಮ್ಮನ್ನು ಶಾಸಕರನ್ನಾಗಿ ಮಾಡಿ ಎಂದು ಕೇಳುತ್ತಿಲ್ಲ. ಬದಲಾಗಿ ಎಸ್ಎಸ್‌ಕೆ ಸಮಾಜವನ್ನು ಎಸ್.ಟಿ ಪಟ್ಟಿಗೆ ಸೇರಿಸಬೇಕು ಎಂಬ ಬೇಡಿಕೆ ಇಡುತ್ತಿದ್ದೇವೆ. ಇದರಿಂದ ನಮ್ಮ ಮುಂದಿನ ಪೀಳಿಗೆಗೆ ಉದ್ಯೋಗ, ಶಿಕ್ಷಣದಲ್ಲಿ ಮೀಸಲಾತಿ ಸಿಗುತ್ತದೆ ಎಂದರು.

ಈ ಸಂದರ್ಭದಲ್ಲಿ ರೇಣುಕಾ ಕಲಬುರ್ಗಿ, ಸ್ನೇಹಲತಾ ಕಬಾಡಿ, ನಾರಾಯಣ ನಿರಂಜನ್, ಫಕ್ಕಿರಸಾ ಬಾಂಡಗೆ, ಶಂಕರಸಾ ಕಲಬುರ್ಗಿ, ಸಂಜೀವ್ ಕಟವಟೆ, ಮಾಧುಸಾ ಮೆರವಾಡೆ, ಬಿ.ಎನ್. ಹಬೀಬ, ಕಾಶಾನಾಥಸಾ ಸಿದ್ಲಿಂಗ, ಶ್ರೀಕಾಂತಸಾ ಬಾಬಾಸಾ, ಗುರುನಾಥ ಹಬೀಬ, ಉಮಾ ಶಂಕರಸಾ ಬೇವಿನಕಟ್ಟಿ, ರಾಘವೇಂದ್ರ ಕಬಾಡಿ ಉಪಸ್ಥಿತರಿದ್ದರು.

> ರಾಜ್ಯದಲ್ಲಿ ಎಲ್ಲ ಸಮುದಾಯಗಳ ಜಯಂತಿಗಳನ್ನು ಸರ್ಕಾರದ ವತಿಯಿಂದ ಆಚರಿಸಲಾಗುತ್ತಿದೆ. ಜೊತೆಗೆ, ಸರ್ಕಾರಿ ರಜೆಗಳನ್ನು ನೀಡುತ್ತಿದ್ದು, ಎಸ್ಎಸ್‌ಕೆ ಸಮಾಜವು ಸಹಸ್ರಾರ್ಜುನ ಜಯಂತಿ ಆಚರಿಸುವಾಗ ಸರ್ಕಾರದಿಂದ ನಮಗೆ ಯಾವುದೇ ಸಹಾಯ, ಸೌಲಭ್ಯ ಸಿಗುತ್ತಿಲ್ಲ. ಸಮುದಾಯಕ್ಕೆ ನಿಗಮ ಮಂಡಳಿ ನಿರ್ಮಿಸಿ ವರ್ಷಕ್ಕೆ 200ಕೋಟಿ ರೂ ಮೀಸಲಿಡಬೇಕು ಹಾಗೂ ಪ್ರತಿ ಜಿಲ್ಲೆಯಲ್ಲಿ ಸಮುದಾಯ ಭವನ ನಿರ್ಮಿಸಬೇಕು ಎಂದು ಪಾಂಡುರಂಗಸಾ ಸರ್ಕಾರವನ್ನು ಆಗ್ರಹಿಸಿದರು.

## ಆಸ್ಪತ್ರೆಗಳಲ್ಲಿ ಔಷಧಗಳ ಕೊರತೆ ಇಲ್ಲ: ಗುಂಡೂರಾವ್

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ರಾಜ್ಯದ ಯಾವುದೇ ಆಸ್ಪತ್ರೆಗಳಲ್ಲಿ ಅಗತ್ಯ ಔಷಧಗಳ ಕೊರತೆ ಇಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಅವರು ವಿಧಾನ ಪರಿಷತ್‌ನಲ್ಲಿ ಸದಸ್ಯ ಹೆಚ್.ಎಸ್. ಗೋಪಿನಾಥ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

ಕರ್ನಾಟಕ ರಾಜ್ಯದ ಸರ್ಕಾರಿ ಆರೋಗ್ಯ ಸಂಸ್ಥೆಗಳಿಗೆ ಅವಶ್ಯವಿರುವ ಹಾಗೂ ಖಣಚಿಣಜ ಖಿಜಡಿಚಿಣಜಣಭಿ ಅಠಟಟುಣಣಜಜ ಯಲ್ಲಿ ನಿರ್ಧರಿಸಿ ಅನುಮೋದಿಸಿದ ಔಷಧಿಗಳ ವಾರ್ಷಿಕ ಬೇಡಿಕೆ ಪಟ್ಟಿಯನ್ನು ಇ-ಂಗಖಊಂಆಂ ತಂತ್ರಾಂಶದ ಮುಖಾಂತರ ಕರ್ನಾಟಕ ರಾಜ್ಯ ವೈದಕೀಯ ಸರಬರಾಜು ನಿಗಮ ನಿಯಮಿತಕ್ಕೆ ಸಲ್ಲಿಸಲಾಗುತ್ತಿದೆ. ಏಖಒಖಅಐ ಸಂಸ್ಥೆಯಿಂದ ಕೆ.ಟಿ.ಪಿ.ಪಿ ನಿಯಮಾನುಸಾರ ಟೆಂಡರ್ ಮುಖಾಂತರ ಔಷಧಿಗಳನ್ನು ಸಂಗ್ರಹಿಸಿ ಜಿಲ್ಲಾವಾರು ಏಖಒಖಅಐ, ಉಗ್ರಾಣಗಳಿಗೆ ಸರಬರಾಜು ಮಾಡಲಾಗುತ್ತಿದೆ ಎಂದರು.

ಖರೀದಿ ಪ್ರಕ್ರಿಯೆ ಪೂರ್ಣಗೊಳ್ಳದ ಔಷಧಗಳನ್ನು ಸೂಕ್ತ ಪ್ರಾಧಿಕಾರದ ಅನುಮೋದನೆಯೊಂದಿಗೆ ಸ್ಥಳೀಯವಾಗಿ ರಾಷ್ಟ್ರೀಯ ಉಚಿತ ಔಷಧಿ ಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಲಭ್ಯವಿರುವ ಅನುದಾನ, ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ (ಂಃಂಖಏ) ಅನುದಾನ, ಆರೋಗ್ಯ ರಕ್ಷ ಸಮಿತಿ (ಂಖಖ) ಹಾಗೂ ಇತರೆ ಅನುದಾನದಲ್ಲಿ ನಿಯಮಾನುಸಾರ ಆರೋಗ್ಯ ಸಂಸ್ಥೆಗಳಿಗೆ ಸ್ಥಳೀಯವಾಗಿ ಖರೀದಿಸಲು ಆರೋಗ್ಯ ಇಲಾಖೆಯಲ್ಲಿ ಅವಕಾಶವಿರುತ್ತದೆ ಎಂದರು.

**ದಿನದರ್ಶಿಕೆ, 'ಬೆಳ್ಳಿ ಬೆಳಕು' ಗ್ರಂಥ, ವಧುವರರ ಅನ್ವೇಷಣಾ ಕೇಂದ್ರದ ಉದ್ಘಾಟನೆ**

# ತಂತ್ರಜ್ಞಾನ ಬಳಸಿ ವಧುವರರ ಮಾಹಿತಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಭಿನ್ನವಾದ ನೂತನ ಯೋಜನೆಗಳನ್ನು ರೂಪಿಸುವ ಮೂಲಕ ವಿಶ್ವಕರ್ಮ ಸಮಾಜವನ್ನು ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘಟನೆಯ ಅಧ್ಯಕ್ಷರಾದ ರಾಜಗೋಪಾಲ ಕಡ್ಲಿಕೊಪ್ಪ ನೇತೃತ್ವದಲ್ಲಿ ಸಂಘಟಿಸುತ್ತಿರುವುದು ಇತರರಿಗೂ ಮಾದರಿಯಾಗಿದೆ ಎಂದು ಜಿಲ್ಲಾ ಗಾಣಿಗ ಸಮಾಜದ ಅಧ್ಯಕ್ಷ ಬಸವರಾಜ ಬಿಂಗಿ ಅಭಿಪ್ರಾಯಪಟ್ಟರು.

ಅವರು ನಗರದ ವಿಜಯನಗರ ಬಡಾವಣೆಯಲ್ಲಿರುವ ವಿಶ್ವಕರ್ಮ ಸಮುದಾಯ ಭವನದಲ್ಲಿ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ ವಿಶ್ವಕರ್ಮ ದಿನದರ್ಶಿಕೆ ಬಿಡುಗಡೆ, ವಿಶ್ವಕರ್ಮ ವಧು-ವರರ ಅನ್ವೇಷಣಾ ಕೇಂದ್ರ ಉದ್ಘಾಟನೆ, ಸಾಧಕರಿಗೆ ಮತ್ತು ಪದೋನ್ನತಿ ಹೊಂದಿದ ಸದಸ್ಯರಿಗೆ ಸನ್ಮಾನ ಮತ್ತು ವಿಶ್ವಕರ್ಮ ಸಮಾಜದ ಹಿರಿಯ ಸಾಹಿತಿ ಭೀಮಸೇನ ಬಡಿಗೇರ ವಿರಚಿತ 'ಬೆಳ್ಳಿ ಬೆಳಕು' ಗ್ರಂಥ ಲೋಕಾರ್ಪಣೆ ಸಮಾರಂಭವನ್ನು ಉದ್ಘಾಟಿಸಿ, ವಿಶ್ವಕರ್ಮ ದಿನದರ್ಶಿಕೆ ಬಿಡುಗಡೆಗೊಳಿಸಿ ಮಾತನಾಡಿದರು.



ಹುನಗುಂದ ಶ್ರೀಮತ್ ಆನೇಗುಂದಿ ಸಂಸ್ಥಾನ ಮಠದ ಪಂಚಾನನ ಗುರುಗಳಾದ ಶ್ರೀ ಗುರಪ್ಪಯ್ಯ ಮಹಾಸ್ವಾಮೀಜಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ, ಸಮಾಜ ಬಾಂಧವರು ಸಂಘಟಿತರಾಗಿ ಎಂದು ಕರೆ ನೀಡಿದರು.

ಧಾರವಾಡ ಕವಿವಿ ನಿವೃತ್ತ ಪ್ರಾಧ್ಯಾಪಕ ಡಾ. ಕೆ.ಪಿ. ಈರಣ್ಣ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಬಸವರಾಜ ಬಡಿಗೇರ ಹಾಗೂ 'ಬೆಳ್ಳಿ ಬೆಳಕು' ಗ್ರಂಥಕರ್ತರಾದ ಭೀಮಸೇನ ಬಡಿಗೇರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಸನ್ಮಾನ ಸ್ವೀಕರಿಸಿ, ಸಮಾರಂಭ ಉದ್ದೇಶಿಸಿ ಮಾತನಾಡಿದರು.

ವಿಶ್ವಕರ್ಮ ಸಜಾಜದ ಮುಖಂಡರಾದ ಮುತ್ತಣ್ಣ ಬಡಿಗೇರ, ಕಾಳೇಶ ಬಡಿಗೇರ, ಮೌನೇಶ ಬಡಿಗೇರ, ನಿಜಗುಣಿ ಶಹಾಪೂರ, ಆಯ್.ಜಿ. ಬಡಿಗೇರ, ರಾಘು ಕಮ್ಮಾರ, ಈರಣ್ಣ ಎಂ.ಬಡಿಗೇರ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಶಿಲ್ಪಕಲಾ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ವೀರಭದ್ರಪ್ಪ ಶಿಲ್ಪಿ ಕವಲೂರ, ವಿಶ್ವಕರ್ಮ ಶಿಕ್ಷಣಭೂಷಣ ಪ್ರಶಸ್ತಿ ಪುರಸ್ಕೃತ ಎ.ಎನ್. ಬಡಿಗೇರ, ಪ್ರಾ.ಶಾ.ಶಿ. ಪತ್ತಿನ ಸಂಘದ ಅಧ್ಯಕ್ಷ ಸುರೇಶ ಕೊಪ್ಪದ, ವಿಶ್ವಕರ್ಮ ಅಭಿವೃದ್ಧಿ ನಿಗಮದ ನಿರ್ದೇಶಕ ಶಿವಪ್ಪ ಕಮ್ಮಾರ, ರಾಜ್ಯಮಟ್ಟದ ಕರಕುಶಲ ವಸ್ತುಪ್ರದರ್ಶನಕ್ಕೆ ಆಯ್ಕೆಯಾದ ಕುಮಾರ ಬಡಿಗೇರ, ಶೇಖರಪ್ಪ ಕಮ್ಮಾರ, ಬಿ.ಎಂ. ಬಡಿಗೇರ, ಬಿ.ಎಮ್. ಯರಕದ ಮುಂತಾದವರನ್ನು ಸನ್ಮಾನಿಸಲಾಯಿತು.

ಸುಮಂಗಲಾ ಪತ್ತಾರ ಪ್ರಾರ್ಥಿಸಿದರು. ಮೌನೇಶ ಸಿ.ಬಡಿಗೇರ(ನರೇಗಲ್ಲ) ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಯ.ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು.

> ಅಧ್ಯಕ್ಷತೆ ವಹಿಸಿದ್ದ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಕಡ್ಲಿಕೊಪ್ಪ ಮಾತನಾಡಿ, ಸಮಗ್ರ ಮಾಹಿತಿ ಒಳಗೊಂಡ ವಿಶ್ವಕರ್ಮ ದಿನದರ್ಶಿಕೆಯನ್ನ ಗದಗ ಜಿಲ್ಲೆಯ ವಿಶ್ವಕರ್ಮ ಸಮಾಜದ ಸಮಸ್ತ ಮನೆಗಳಿಗೆ ಉಚಿತವಾಗಿ ತಲುಪಿಸಲಾಗುವುದು. ಆಧುನಿಕ ತಂತ್ರಜ್ಞಾನ ಬಳಕೆ ಮಾಡಿಕೊಂಡು ವಿಶ್ವಕರ್ಮ ವಧು-ವರ ಅನ್ವೇಷಣಾ ಕೇಂದ್ರ ಲೋಕಾರ್ಪಣೆಯಾಗಿದ್ದು, ಕೇಂದ್ರದ ಆ್ಯಪ್ ಮೂಲಕ ವಧು-ವರರ ಮಾಹಿತಿ ಸಂಗ್ರಹಿಸಿ ಸಂಪರ್ಕ ಸಾಧಿಸಿ ಅನ್ವೇಷಿಕರಿಗೆ ಅನಕೂಲಕ ಮಾಡಿಕೊಡಲಾಗುವುದು ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka